# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 255 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 30–04–2024 ಮಂಗಳವಾರ | ಪುಟ: 4 | ಬೆಲೆ : ರೂ.2–00

Volume - 01 Issue - 255 | Title- Code: KARKAN 28269 | Chitradurga | Date: 30-04-2024 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಸ್ಕೂಟಿಯಲ್ಲಿದ್ದ ಲಕ್ಷ ನಗದು ಹಣವನ್ನು ಹಾಡುಹಗಲೇ ಲಪಟಾಯಿಸಿದ ಕಳ್ಳರು 2

ನಮ್ಮ ನಡೆ ಮತಗಟ್ಟೆ ಕಡೆ, ತಪ್ಪದೇ ಮೇ.7 ರಂದು ಮತದಾನ ಮಾಡಲು ಕರೆ 3

ಚುನಾವಣೆಯ ದಿನ ಬಂದಿದೆ, ಬಟನ್ ಅನ್ನು ಬುದ್ಧಿವಂತಿಕೆಯಿಂದ ಒತ್ತಿರಿ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

### ಫಾಸ್ಟ್ ನ್ಯೂಸ್

## ದ್ವಿತೀಯ ಪಿಯುಸಿ ಪರೀಕ್ಷೆ-2: 135 ವಿದ್ಯಾರ್ಥಿಗಳ ಗೈರು

» ಚಿತ್ರದುರ್ಗ



ಏ.29 ರಂದು ನಡೆದ ದ್ವಿತೀಯ ಪಿಯುಸಿ ಪರೀಕ್ಷೆ–2ಯಲ್ಲಿ ಕನ್ನಡ ಭಾಷಾ ವಿಷಯದ ಪರೀಕ್ಷೆಗೆ 135 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಕನ್ನಡ ಭಾಷಾ ವಿಷಯದ ಪರೀಕ್ಷೆಗೆ ಒಟ್ಟು 946 ವಿದ್ಯಾರ್ಥಿಗಳು ನೊಂದಣಿಯಾಗಿದ್ದು, 811 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ, 135 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಜಿಲ್ಲೆಯ 09 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆದಿದ್ದು, ಯಾವುದೇ ಡಿಬಾರ್ ಪ್ರಕರಣ ಇರುವುದಿಲ್ಲ. ಏ.30ರಂದು ಇತಿಹಾಸ ಮತ್ತು ಭೌತಶಾಸ್ತ್ರ ವಿಷಯದ ಪರೀಕ್ಷೆ ನಡೆಯಲಿದೆ ಎಂದು ಉಪನಿರ್ದೇಶಕರು ತಿಳಿಸಿದ್ದಾರೆ.

### ಡಾ.ಅಂಬೇಡ್ಕರ್‌ರವರ 133 ನೇ ಜಯಂತಿ ಉದ್ಘಾಟಿಸಿ ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾ.ಕೆ.ಬಿ.ಗೀತ ಹೇಳಿಕೆ

# ಕಾನೂನು ಪಿತಾಮಹ ಅಂಬೇಡ್ಕರ್

» ಚಿತ್ರದುರ್ಗ



ಸ್ವಾತಂತ್ರ್ಯ, ಸಮಾನತೆ, ಸಹೋದರತ್ವ ಬೋಧಿಸುವ ಧರ್ಮವನ್ನು ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಇಷ್ಟ ಪಡುತ್ತಿದ್ದರು ಎಂದು ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರಾದ ಶ್ರೀಮತಿ ಕೆ.ಬಿ.ಗೀತ ಹೇಳಿದರು.

ಜಿಲ್ಲಾ ವಕೀಲರ ಬಳಗದಿಂದ ವಕೀಲರ ಭವನದಲ್ಲಿ ಸೋಮವಾರ ಏರ್ಪಡಿಸಲಾಗಿದ್ದ ಡಾ.ಬಿ.ಆರ್.ಅಂಬೇಡ್ಕರ್‌ರವರ 133 ನೇ ಜಯಂತಿ ಉದ್ಘಾಟಿಸಿ ಮಾತನಾಡಿದರು.

ಆಳವಾದ ಅಧ್ಯಯನ ಮಾಡಿದ್ದ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಕಷ್ಟ ಸಹಿಷ್ಣುವಾಗಿದ್ದರು. ಪ್ರಪಂಚ ಪರ್ಯಟನೆ ಮಾಡಿ ಭಾರತಕ್ಕೆ ಅತ್ಯಂತ ಶಕ್ತಿಶಾಲಿಯಾದ ಸಂವಿಧಾನವನ್ನು ರಚಿಸಿ ಕೊಡುಗೆಯಾಗಿ ನೀಡಿದ್ದಾರೆ. ಹಾಗಾಗಿ ಅವರೊಬ್ಬ ಕಾನೂನು ಪಿತಾಮಹ ಎಂದು ತಿಳಿಸಿದರು. ಪ್ರತಿಯೊಬ್ಬರು ಜೀವನ ಉದ್ದೀಪನಗೊಳಿಸಿಕೊಳ್ಳಲು ಸನ್ಮಾರ್ಗದಲ್ಲಿ ನಡೆಯಬೇಕು ಎನ್ನುವ ಆಶಯ ಅವರದಾಗಿತ್ತು. ಎಲ್ಲಾ ಜಾತಿ ಧರ್ಮದವರ ಸಮಾನತೆ. ಅದರಲ್ಲೂ ವಿಶೇಷವಾಗಿ ಮಹಿಳೆಯರ ಹಕ್ಕಿಗಾಗಿ ಸಾಕಷ್ಟು ಹೋರಾಟ ಮಾಡಿದ್ದರು. ರಾಜಕೀಯ ಪ್ರಜಾಪ್ರಭುತ್ವದಲ್ಲಿ ಸಾಮಾಜಿಕ ಪ್ರಜಾಪ್ರಭುತ್ವವಿರಬೇಕೆಂಬುದು ಡಾ.ಬಿ.ಆರ್.ಅಂಬೇಡ್ಕರ್‌ರವರ ಆಶಯವಾಗಿತ್ತು. ಕಾನೂನು ರಕ್ಷಣೆ ಮಾಡಬೇಕಾದರೆ ಕಾನೂನು ಮತ್ತು ಸುವ್ಯವಸ್ಥೆ ಇರಬೇಕು. ಆಗ ಮಾತ್ರ ಆರೋಗ್ಯ ಪೂರ್ಣ ಸಮಾಜ ನಿರ್ಮಾಣ ಸಾಧ್ಯ. ಹೋರಾಟದಿಂದ ಹಕ್ಕು ಪಡೆಯಬಹುದುಎನ್ನುವುದುಸಂವಿಧಾನದ ಮೂಲ ಆಶಯ ಎಂದರು.ಸಂವಿಧಾನದಲ್ಲಿ ಶಿಕ್ಷಣವನ್ನು ಮೂಲಭೂತ ಹಕ್ಕನ್ನಾಗಿ ನೀಡಲಾಗಿದೆ. ಅದಕ್ಕಾಗಿ ಪ್ರತಿಯೊಬ್ಬರು ಶಿಕ್ಷಣವಂತರಾಗುವ ಮೂಲಕ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕೆಂದರು.

ಒಂದನೆ ಜಿಲ್ಲಾ ಸತ್ರ ನ್ಯಾಯಾಧೀಶರಾದ ನಿಂಬಣ್ಣ ಶಂಕರಪ್ಪ ಕಲ್ಕಣಿ ಮಾತನಾಡಿ ಶಿಕ್ಷಣ, ಸಂಘಟನೆ, ಹೋರಾಟ ಸಂವಿಧಾನ ನೀಡಿರುವ ಮೂಲ ಹಕ್ಕು, ದೇಶಕ್ಕೆ ಸಂವಿಧಾನವನ್ನು ನೀಡಿರುವ ಡಾ.ಬಿ.ಆರ್.ಅಂಬೇಡ್ಕರ್ ವಿದ್ವತ್ತನ್ನು ಸ್ವಂತಕ್ಕೆ ಎಂದಿಗೂ ಬಳಸಿಕೊಳ್ಳಲಿಲ್ಲ. ಜನಸಾಮಾನ್ಯರ ಹಕ್ಕುಗಳ ರಕ್ಷಣೆಗೆ ಹೊಸ ಹೊಸ ಕಾನೂನುಗಳನ್ನು ಜಾರಿಗೆ ತಂದರು. ದೇವಾಲಯಗಳಿಗಿಂತ ಶಾಲೆಗಳಿಗೆ ಹೆಚ್ಚಿನ ಒತ್ತುನೀಡಬೇಕೆಂಬುದು ಅಂಬೇಡ್ಕರ್‌ರವರ ಚಿಂತನೆಯಾಗಿತ್ತು. ಬಾಲ್ಯದಿಂದಲೂ ಜೀವನದಲ್ಲಿ ಅನೇಕ ವಿರೋಧಗಳನ್ನು ಎದುರಿಸಿದ ಡಾ.ಬಿ.ಆರ್.ಅಂಬೇಡ್ಕರ್ ತತ್ವಗಳಂತೆ ಎಲ್ಲರೂ ನಡೆಯುವುದೆ ಅವರಿಗೆ ನೀಡುವ ಬಹುದೊಡ್ಡ ಗೌರವ ಎಂದು ಹೇಳಿದರು.ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಯ ಅಧ್ಯಕ್ಷತೆ ವಹಿಸಿದ್ದ ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ ಮಾತನಾಡಿ ಚಿಕ್ಕಂದಿನಿಂದಲೂ ಹಸಿವು, ನೋವು, ಅವಮಾನ, ಹಿಂಸೆಗಳನ್ನು ಅನುಭವಿಸಿದ್ದರಿಂದಲೇ ಡಾ.ಬಿ.ಆರ್.ಅಂಬೇಡ್ಕರ್ ಸಂವಿಧಾನ ರಚಿಸಲು ಸಾಧ್ಯವಾಯಿತು. ಜ್ಞಾನ, ಶಿಕ್ಷಣದ ಹಸಿವಿತ್ತು. ಮಹಾನ್ ಮಾನವತಾವಾದಿ ಡಾ.ಬಿ.ಆರ್.ಅಂಬೇಡ್ಕರ್‌ರವರ ವಿಚಾರಗಳನ್ನು ತಿಳಿದುಕೊಳ್ಳಬೇಕಾದರೆ ಪ್ರತಿಯೊಬ್ಬರು ಸಂವಿಧಾನವನ್ನು ಓದಬೇಕು ಎಂದು ನುಡಿದರು.

ನ್ಯಾಯವಾದಿ ಬೀಸ್ನಳ್ಳಿ ಜಯಣ್ಣ ಮಾತನಾಡುತ್ತ ವಕೀಲರ ಬಳಗದಿಂದ ಕಳೆದ ಹತ್ತು ವರ್ಷಗಳಿಂದಲೂ ಡಾ.ಬಿ.ಆರ್.ಅಂಬೇಡ್ಕರ್‌ರವರ ಜಯಂತಿಯನ್ನು ಆಚರಿಸಿಕೊಂಡು ಬರುತ್ತಿದ್ದೇವೆ. ಕೇವಲ ದಲಿತರಿಗಷ್ಟೆ ಅಲ್ಲ. ಎಲ್ಲಾ ಜಾತಿ ಧರ್ಮದವರಿಗೂ ಸಮಾನತೆ ಸಿಗಬೇಕೆನ್ನುವುದು ಅವರ ಉದ್ದೇಶವಾಗಿತ್ತು. ಶಿಕ್ಷಣ, ಸಂಘಟನೆ, ಹೋರಾಟ ಅವರ ಮೂಲ ಮಂತ್ರವಾಗಿತ್ತು. ಕಬೀರದಾಸರ ಚಿಂತನೆ ಮೈಗೂಡಿಸಿಕೊಂಡಿದ್ದ ಡಾ.ಬಿ.ಆರ್.ಅಂಬೇಡ್ಕರ್ ಹಿಂದೂ ಕೋಡ್ ಬಿಲ್ ಪಾಸ್ ಆಗಲಿಲ್ಲವೆಂದು ಮಂತ್ರಿ ಸ್ಥಾನಕ್ಕೆ ರಾಜಿನಾಮೆ ನೀಡಿ ಹೊರ ಬಂದರು. ಅಧಿಕಾರದ ಹಿಂದೆ ಎಂದಿಗೂ ಹೋಗಲಿಲ್ಲ. ಅಂತಹ ಶ್ರೇಷ್ಟ ವ್ಯಕ್ತಿತ್ವ ಅವರದಾಗಿತ್ತು ಎಂದು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಂ.ವಿಜಯ, ಒಂದನೆ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರುಗಳಾದ ಎ.ಎಂ.ಚೈತ್ರ, ನೇಮಿಚಂದ್, ಎರಡನೆ ಅಪರ ಸಿವಿಲ್ ನ್ಯಾಯಾಧೀಶರಾದ ಅನಿತಾಕುಮಾರ್, ವಕೀಲರ ಸಂಘದ ಉಪಾಧ್ಯಕ್ಷ ಬಿ.ಎಂ.ಅನಿಲ್‌ಕುಮಾರ್, ಪ್ರಧಾನ ಕಾರ್ಯದರ್ಶಿ ಆರ್.ಗಂಗಾಧರ್, ಜಂಟಿ ಕಾರ್ಯದರ್ಶಿ ಗಿರೀಶ್ ಮಲ್ಲಾಪುರ, ಖಜಾಂಚಿ ಪ್ರದೀಪ್‌ಕುಮಾರ್, ವಕೀಲರ ಸಂಘದ ಮಾಜಿ ಅಧ್ಯಕ್ಷ ವಿಜಯಕುಮಾರ್ ವೇದಿಕೆಯಲ್ಲಿದ್ದರು. ಎಸ್.ವಿಜಯಕುಮಾರ್ ಪ್ರಾರ್ಥಿಸಿದರು, ಎಂ.ಕೆ.ಲೋಕೇಶ್ ಸ್ವಾಗತಿಸಿದರು. ವಕೀಲರ ಸಂಘದ ಮಾಜಿ ಕಾರ್ಯದರ್ಶಿ ಟಿ.ಹನುಮಂತಪ್ಪ ನಿರೂಪಿಸಿದರು.

ಹಿರಿಯ ವಕೀಲರುಗಳಾದ ಬಿ.ಕೆ.ರಹಮತ್‌ವುಲ್ಲಾ, ವಿಶ್ವನಾಥಯ್ಯ, ವಕೀಲರ ಸಂಘದ ಮಾಜಿ ಅಧ್ಯಕ್ಷ ಎನ್.ಬಿ.ವಿಶ್ವನಾಥ್, ಡಿ.ವೆಂಕಟೇಶ್ ಸೇರಿದಂತೆ ನೂರಾರು ವಕೀಲರುಗಳು ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಯಲ್ಲಿ ಭಾಗವಹಿಸಿದ್ದರು.




## ಫಾಸ್ಟ್ ನ್ಯೂಸ್

### ಪೋಷಕರಿಗೆ ಕ್ಷೇತ್ರ ಶಿಕ್ಷಣಾಧಿಕಾರಿ ನಾಗಭೂಷಣ್ ಎಚ್ಚರಿಕೆ

» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕಿನ ಹಲವು ಕಡೆ ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳು ಸರ್ಕಾರದಿಂದ ಸೂಕ್ತ ಮಾನ್ಯತೆ ಪಡೆಯದೆ ಶಾಲೆ ನಡೆಸುತ್ತಿವೆ. ದಯಮಾಡಿ ಪೋಷಕರು ಹೊಸದಾಗಿ ಶಾಲೆಗೆ ಮಕ್ಕಳನ್ನು ಸೇರಿಸುವಾಗ ಅಥವಾ ಒಂದು ಶಾಲೆಯಿಂದ ಇನ್ನೊಂದು ಶಾಲೆ ಮಕ್ಕಳನ್ನು ದಾಖಲಿಸುವಾಗ ಎಚ್ಚರಿಕೆಯನ್ನು ವಹಿಸಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷನ್ ತಿಳಿಸಿದ್ದಾರೆ. ತಾಲ್ಲೂಕಿನಲ್ಲಿ ರಾಜ್ಯ ಪಠ್ಯಕ್ರಮದ 77, ಸಿಬಿಎಸ್‌ಸಿ ಪಠ್ಯಕ್ರಮದ 05 ಮತ್ತು ಸಿ.ಐ.ಎಸ್.ಸಿ.ಇ ಪಠ್ಯಕ್ರಮದ 3 ಶಾಲೆಗಳು ಅಧಿಕೃತವಾಗಿ ನೊಂದಣಿಯಾಗಿವೆ. ಈ ಶಾಲೆಗಳ ಹೆಸರು, ಆಡಳಿತ ಮಂಡಳಿ ವಿಳಾಸ, ಶಾಲಾ ವಿಳಾಸ, ಡೈಸ್ ಸಂಖ್ಯೆ, ನೊಂದಣಿ ಪಡೆದ ವರ್ಷ, ನೊಂದಣಿ ಪಡೆದ ಮಾಧ್ಯಮ, ಮಾನ್ಯತೆ ನವೀಕರಣ, ಅನುಮತಿ ಪಡೆದ ತರಗತಿಗಳು, ಪಠ್ಯಕ್ರಮ ವಿವರಗಳನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯಲ್ಲಿ ಸಾರ್ವಜನಿಕರ ತಿಳುವಳಿಕೆಗಾಗಿ ಪ್ರಕಟ ಮಾಡಲಾಗಿದೆ. ಈ ಶಾಲೆಗಳನ್ನು ಹೊರತುಪಡಿಸಿ ಇತರೆ ಯಾವುದೇ ಶಾಲೆಗಳಿಗೆ ಪೋಷಕರು ಮಕ್ಕಳನ್ನು ದಾಖಲಿಸಿದಲ್ಲಿ ಶಾಲಾ ಶಿಕ್ಷಣ ಇಲಾಖೆ ಯಾವುದೇ ರೀತಿಯಾ ಜವಾಬ್ದಾರಿಯಾಗಿರುವುದಿಲ್ಲ. ಆಯಾ ಪೋಷಕರೇ ಜವಾಬ್ದಾರಿಯಾಗಿರುತ್ತಾರೆ. ಆದ್ದರಿಂದ ಪೋಷಕರು ಅಧಿಕೃತವಾಗಿ ಮಾನ್ಯತೆ ಪಡೆದ ಶಾಲೆಗಳ ಬಗ್ಗೆ ಮಾಹಿತಿ ಪಡೆದು ಮಕ್ಕಳನ್ನು ದಾಖಲಿಸುವಂತೆ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್. ನಾಗಭೂಷಣ್ ಕೋರಿದ್ದಾರೆ.

### ಇಂದು ಚಿಕ್ಕಪ್ಪನಹಳ್ಳಿ ಕೊಟ್ರಸ್ವಾಮಿ ರಥೋತ್ಸವ



» **ಚಿತ್ರದುರ್ಗ**

ತಾಲೂಕಿನ ಚಿಕ್ಕಪ್ಪನಹಳ್ಳಿ ಗ್ರಾಮದ ಶ್ರೀಗುರು ಕೊಟ್ರಸ್ವಾಮಿ ರಥೋತ್ಸವ ಏಪ್ರಿಲ್ 30 ರ ಮಂಗಳವಾರ ಬೆಳಿಗ್ಗೆ 10 ಗಂಟೆಗ ವಿಜೃಂಭಣೆಯಿಂದ ನೆರವೇರಲಿದೆ. ರಥೋತ್ಸವದ ಬಳಿಕ ಮಧ್ಯಾಹ್ನ 2 ಗಂಟೆಗೆ ಓಕಳಿ, ನಂತರ 3 ಗಂಟೆಗೆ ಸ್ವಾಮಿಯು ಗಂಗಾಪೂಜೆ ನೆರವೇರಿಸಿಕೊಂಡು ಪಲ್ಲಕ್ಕಿ ಉತ್ಸವದೊಂದಿಗೆ ದೇವಸ್ಥಾನಕ್ಕೆ ಮರಳಲಿದೆ. ರಥೋತ್ಸವದ ಮುನ್ನಾ ದಿನವಾದ ಸೋಮವಾರ ಬೆಳಿಗ್ಗೆ 10 ಗಂಟೆಗೆ ರುದ್ರಾಭಿಷೇಕ, ಇಷ್ಟಲಿಂಗ ಮಹಾಪೂಜೆ 4 ಗಂಟೆಗೆ ಕೋಣಂದೂರು ಪುರ ಮಠದ ಶ್ರೀಪತಿ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳ ಪಾದಪೂಜೆ ಮತ್ತು ಆಶೀರ್ವಚನ ಇರುತ್ತದೆ. ಸಂಜೆ 7 ಗಂಟೆಗೆ ಗಣಾರಾಧನೆ, ಸಾಮೂಹಿಕ ದಾಸೋಹ ಸೇವೆ ಇರುತ್ತದೆ.

### ಪ್ರತಿಷ್ಠಿತ ಶಾಲೆ ಪ್ರವೇಶ: ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಂದ ಅರ್ಜಿ

» **ಚಿತ್ರದುರ್ಗ**

ಸಾಮಾಜಿಕ ಹಾಗೂ ಆರ್ಥಿಕವಾಗಿ ಹಿಂದುಳಿದ ಪರಿಶಿಷ್ಟ ವರ್ಗದ (ಎಸ್.ಟಿ) ಪ್ರತಿಭಾವಂತ ವಿದ್ಯಾರ್ಥಿಗಳನ್ನು ಜಿಲ್ಲೆಯ ಪ್ರತಿಷ್ಠಿತ ಶಾಲೆಗಳಿಗೆ 6ನೇ ತರಗತಿಗೆ ದಾಖಲಿಸಲು, ಪರಿಶಿಷ್ಟ ವರ್ಗಗಳ ಇಲಾಖೆ ವತಿಯಿಂದ ಅರ್ಜಿ ಆಹ್ವಾನಿಸಲಾಗಿದೆ. ಮೇ 9 ರಿಂದ ಅರ್ಜಿ ಸಲ್ಲಿಕೆ ಆರಂಭವಾಗಲಿದೆ. ಮೇ 21 ಅರ್ಜಿ ಸಲ್ಲಿಸಲು ಕಡೆಯ ದಿನವಾಗಿದೆ.

5ನೇ ತರಗತಿಯಲ್ಲಿ ಶೇ. 60 ಕ್ಕಿಂತ ಹೆಚ್ಚು ಅಂಕಗಳಿಸಿರುವ ವಾರ್ಷಿಕವಾಗಿ, ಕುಟುಂಬದ ವರಮಾನ ರೂ.2.00 ಲಕ್ಷ ಇರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು ಧೃಡೀಕೃತ ಅಂಕಪಟ್ಟಿಯನ್ನು ಅರ್ಜಿ ಜೊತೆಗೆ ಕಡ್ಡಾಯವಾಗಿ ಲಗತ್ತಿಸಬೇಕು. ಮುಖ್ಯೋಪಾಧ್ಯಯರು ಕಡ್ಡಾಯವಾಗಿ ಶೇಕಡವಾರು ನಮೂದಿಸಿದ ಅಂಕಪಟ್ಟಿಯನ್ನು ಮಾತ್ರ ಆಯ್ಕೆ ಪರಿಗಣಿಸಲಾಗುವುದು. ಅಂಕಪಟ್ಟಿಯಲ್ಲಿನ ಗ್ರೇಡ್‌ಅನ್ನು ನಮೂದಿಸಿದ್ದಲ್ಲಿ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ. ಅರ್ಹತಾ ಪರೀಕ್ಷಾ ಮೂಲಕ ವಿದ್ಯಾರ್ಥಿಗಳು ಆಯ್ಕೆ ಮಾಡಲಾಗುವುದು. ಪೋಷಕರು ಆಯ್ಕೆ ಮಾಡಿದ ಪ್ರತಿಷ್ಠಿತ ಶಾಲೆಗೆ ವಿದ್ಯಾರ್ಥಿಗಳನ್ನು ದಾಖಲು ಮಾಡಲಾಗುವುದು. ವಿದ್ಯಾರ್ಥಿಗಳ ಶುಲ್ಕ ಮತ್ತು ನಿರ್ವಹಣಾ ವೆಚ್ಚವನ್ನು ಸರ್ಕಾರದ ನಿಯಮಗಳ ಅಡಿ ಪ್ರವೇಶ ಪಡೆದ ಶಾಲೆಯು ನಿಗಧಿ ಪಡಿಸಿದ ದರದಲ್ಲಿ ನೀಡಲಾಗುವುದು. ಆಯಾ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಹಾಗೂ ಚಿತ್ರದುರ್ಗ ನಗರದ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಅರ್ಜಿ ಪಡೆದುಕೊಳ್ಳಬಹುದು. ಅಪೂರ್ಣಗೊಂಡ ಹಾಗೂ ಅವಧಿ ಮೀರಿ ಬಂದ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಎಂದು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ತಿಳಿಸಿದೆ.

---

**ಉಪನ್ಯಾಸ ಕಾರ್ಯಕ್ರಮದಲ್ಲಿ ಡಾ.ನೆಲ್ಲಿಕಟ್ಟೆ ಎಸ್.ಸಿದ್ದೇಶ ಅಭಿಮತ**

# ಅಂಬೇಡ್ಕರ್, ಬಾಬೂಜಿ ಸಾಮಾಜಿಕ ಪರಿವರ್ತನೆಯ ನಾಣ್ಯದ ಎರಡು ಮುಖಗಳು

» **ಚಿತ್ರದುರ್ಗ**

"ಸಾಧನೆಯಲ್ಲಿ ಸಾರ್ಥಕತೆ ಕಂಡುಕೊಂಡ, ಜಾತಿ ಜಾಡ್ಯ ಜಾಲಾಡಿಸಿದ ಹಾಗೂ ಸಾಮಾಜಿಕ ಪರಿವರ್ತನೆಯ ನಾಣ್ಯದ ಎರಡು ಮುಖಗಳು ಡಾ.ಬಿ.ಆರ್. ಅಂಬೇಡ್ಕರ್ ಹಾಗೂ ಡಾ.ಬಾಬೂ ಜಗಜೀವನ್ ರಾಮ್" ಎಂದು ಕುವೆಂಪು ವಿಶ್ವವಿದ್ಯಾನಿಲಯ ಡಾ.ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರದ ಪ್ರಾಧ್ಯಾಪಕರು ಹಾಗೂ ನಿರ್ದೇಶಕರಾದ ಡಾ.ನೆಲ್ಲಿಕಟ್ಟೆ ಎಸ್.ಸಿದ್ದೇಶ ಅಭಿಪ್ರಾಯಪಟ್ಟರು.

ಚಿತ್ರದುರ್ಗ ತಾಲ್ಲೂಕಿನ ಜಿ.ಆರ್.ಹಳ್ಳಿಯ ದಾವಣಗೆರೆ ವಿಶ್ವವಿದ್ಯಾನಿಯಲಯದ ಜ್ಞಾನ ಗಂಗೋತ್ರಿಯ ಸ್ನಾತಕೋತ್ತರ ಅಧ್ಯಯನ ಕೇಂದ್ರದ ವಿಜ್ಞಾನ ಭವನ ಸಭಾಂಗಣದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಡಾ.ಬಾಬೂ ಜಗಜೀವನ್ ರಾಮ್ ಅವರ ಜನ್ಮ ದಿನದ ಪ್ರಯುಕ್ತ ಹಮ್ಮಿಕೊಂಡಿದ್ದ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಸಮಾನತೆ, ಅವಮಾನ ಮತ್ತು ಹಸಿವುಗಳಿಂದ ತಲ್ಲಣಿಸುತ್ತಿದ್ದ ಜನತೆಗೆ






ಅರಿವು ಭಿತ್ತಿ ಅಭಿವೃದ್ಧಿ ಪಥದಲ್ಲಿ ನೆಲೆಯಾಗಿಸಲು ಅಪಮಾನ, ಅಗೌರವಗಳಿಗೆ ಹೆದರದೇ ಎದುರಿಸುವ ತಾಕತ್ತು ಸರ್ವರೂ ಸಂಪಾದಿಸಿಕೊಳ್ಳಬೇಕೆಂದು ಸಾರಿದ ಮಹಾಪುರುಷರು ಡಾ.ಬಿ.ಆರ್. ಅಂಬೇಡ್ಕರ್ ಹಾಗೂ ಡಾ.ಬಾಬೂ ಜಗಜೀವನ್ ರಾಮ್. ಅವರದು ಅನುಭವಿ ರೂಪಿತ ವ್ಯಕ್ತಿತ್ವ. ಇವರುಗಳ ಜೀವನ ಚರಿತ್ರೆಯೆಂದರೆ ವಿರೂಪವಾಗಿರುವ ಭಾರತೀಯ ಸಾಮಾಜಿಕ ಸಂರಚನೆಯನ್ನು ಸುಸ್ವರೂಪಕ್ಕೆ ಪ್ರೇರೇಪಿಸುವ ಚಿಂತನೆಗಳ ಚರಿತ್ರೆಯಾಗಿದೆ ಎಂದರು.

ಅಂಬೇಡ್ಕರ್ ಹಾಗೂ ಬಾಬೂಜಿ ಅವರ ಜೀವನ ಮತ್ತು ಸಾಧನೆಗಳನ್ನು ಅರಿಯುವುದೆಂದರೆ ಮಾನವೀಯತೆಯನ್ನು ಅರಿತಂತೆ. ಮನುಷ್ಯರಲ್ಲಿ ಪ್ರೀತಿ, ಕರುಣೆ, ಸಮಾನತೆ, ಸಂಬಂಧ, ಸೌಜನ್ಯ, ಸತ್‌ಚಿಂತನೆ, ಸತ್ ನುಡಿ, ಸತ್ ನಡೆಗಳನ್ನು ಬಿತ್ತಿ ಬೆಳೆಯುವಂತಹದು ಹಾಗೂ ಮನದ ಮಾಲಿನ್ಯವನ್ನೂ ತೊಳೆಯುವಂತಹದು ಡಾ.ಅಂಬೇಡ್ಕರ್ ಹಾಗೂ ಡಾ.ಬಾಬೂಜಿ ಅವರ ಜೀವನ ಚರಿತ್ರೆಯಾಗಿದೆ ಎಂದರು.

ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿದರು. ಜಿ.ಆರ್. ಹಳ್ಳಿ ಸ್ನಾತಕೋತ್ತರ ಅಧ್ಯಯನ ಕೇಂದ್ರದ ನಿರ್ದೇಶಕ ಪ್ರೊ.ಎಂ.ಯು.ಲೋಕೇಶ್ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಜಿ.ಆರ್.ಹಳ್ಳಿ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಕನ್ನಡ ವಿಭಾಗದ ಸಂಯೋಜಕ ಡಾ.ಹೆಚ್.ಜಿ.ವಿಜಯಕುಮಾರ್, ಸಸ್ಯಶಾಸ್ತ್ರ ವಿಭಾಗದ ಸಂಯೋಜಕಿ ಬಿ.ಟಿ.ನಿವೇದಿತಾ, ವಾಣಿಜ್ಯಶಾಸ್ತ್ರ ವಿಭಾಗದ ಸಂಯೋಜಕ ಡಾ.ಆರ್.ಕೆ.ಸತೀಶ್, ಪ್ರಾಧ್ಯಾಪಕರಾದ ಡಾ.ಪ್ರಕಾಶ್, ಡಾ.ಭೀಮಾಶಂಕರ್ ಜೋಶಿ ಸೇರಿದಂತೆ ಮತ್ತಿತರರು ಇದ್ದರು.

---

## ಸಂಸದ ಪ್ರಜ್ವಲ್, ಶಾಸಕ ರೇವಣ್ಣ ಕೂಡಲೆ ಬಂಧಿಸಿ

» **ಚಿತ್ರದುರ್ಗ**

ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳದಲ್ಲಿ ಭಾಗಿಯಾಗಿರುವ ಸಂಸದ ಪ್ರಜ್ವಲ್ ರೇವಣ್ಣ ಹಾಗೂ ಶಾಸಕ ರೇವಣ್ಣ ಇವರುಗಳನ್ನು ಕೂಡಲೆ ಬಂಧಿಸಿ ಕಾನೂನು ರೀತಿಯ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಕರುನಾಡ ವಿಜಯಸೇನೆಯಿಂದ ಜಾತ್ಯಾತೀತ ಜನತಾದಳದ ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಸಿ ಧಿಕ್ಕಾರಗಳನ್ನು ಕೂಗಲಾಯಿತು.

ಮನವಿ ಸ್ವೀಕರಿಸಲು ಬಾರದ ಜೆಡಿಎಸ್.ಮುಖಂಡರುಗಳ ವಿರುದ್ದವೂ ಧಿಕ್ಕಾರಗಳನ್ನು ಕೂಗಿದ ಪ್ರತಿಭಟನಾಕಾರರು ಮನವಿ ಪತ್ರವನ್ನು ಜೆಡಿಎಸ್. ಕಚೇರಿಯ ಗೋಡೆಗೆ ಅಂಟಿಸಿದರು.

ಎರಡು ಸಾವಿರಕ್ಕೂ ಹೆಚ್ಚು ಲೈಂಗಿಕ ಪ್ರಕರಣದಲ್ಲಿ ತೊಡಗಿರುವ ಪ್ರಜ್ವಲ್ ರೇವಣ್ಣ ಜರ್ಮನ್‌ಗೆ ಫಲಾಯನಗೊಂಡಿದ್ದು. ಕೂಡಲೆ ಅಲ್ಲಿಂದ ಬಂಧಿಸಿ ಕರೆತರಬೇಕು. ಜಾತ್ಯಾತೀತ ಜನತಾದಳದ ರಾಷ್ಟ್ರೀಯ ಅಧ್ಯಕ್ಷ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಹಾಗೂ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಇವರುಗಳು ಲೈಂಗಿಕ ಹಗರಣಕ್ಕೆ ಯಾವುದೇ ರಾಜಕೀಯ ಬಣ್ಣ ಬೆರೆಸದೆ ಕೂಡಲೆ ಪ್ರಜ್ವಲ್




ರೇವಣ್ಣ ಹಾಗೂ ರೇವಣ್ಣ ಇವರುಗಳನ್ನು ಪಕ್ಷದಿಂದ ಉಚ್ಚಾಟಿಸಬೇಕು ಎಂದು ಪ್ರತಿಭಟನಾನಿರತರು ಒತ್ತಾಯಿಸಿದರು.ಲೈಂಗಿಕ ಹಗರಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ತನಿಖೆಯನ್ನು ಎಸ್.ಐ.ಟಿ.ಗೆ ವಹಿಸಿದೆ. ಏನು ತಪ್ಪು ಮಾಡಿಲ್ಲವೆಂದ ಮೇಲೆ ಪ್ರಜ್ವಲ್‌ರೇವಣ್ಣ ಏಕೆ ಜರ್ಮನಿಗೆ ಪಲಾಯನಗೊಂಡು ತಲೆ ಮರೆಸಿಕೊಳ್ಳಬೇಕು ಎಂದು ಪ್ರಶ್ನಿಸಿದ ಪ್ರತಿಭಟನೆಯ ನೇತೃತ್ವ ವಹಿಸಿದ್ದ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಹಗರಣವನ್ನು ಸರ್ಕಾರ ಗಂಭೀರವಾಗಿ ತೆಗೆದುಕೊಂಡು ಕಾಮುಕರಿಗೆ ತಕ್ಕ ಶಿಕ್ಷೆ ವಿಧಿಸಬೇಕೆಂದು ಆಗ್ರಹಿಸಿದರು.ಕರುನಾಡ ವಿಜಯಸೇನೆ ಮಹಿಳಾ ಘಟಕದ ಅಧ್ಯಕ್ಷೆ ವೀಣಗೌರಣ್ಣ, ಪ್ರಧಾನ ಕಾರ್ಯದರ್ಶಿ ಗೋಪಿನಾಥ್, ಕಾರ್ಯದರ್ಶಿ ಅಣ್ಣಪ್ಪ, ಉಪಾಧ್ಯಕ್ಷೆ ರತ್ನಮ್ಮ, ಸಂಚಾಲಕ ಹರೀಶ್‌ಕುಮಾರ್, ನಗರಾಧ್ಯಕ್ಷ ಅವಿನಾಶ್, ಯುವ ಘಟಕದ ಅಧ್ಯಕ್ಷ ನಾಗರಾಜ್‌ಮುತ್ತು, ರಾಜಣ್ಣ, ಕಮಲಮ್ಮ, ಸುರೇಶ್, ನಿಸಾರ್ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಬೆಳೆ ಸಮೀಕ್ಷೆ ಜಿ.ಪಿ.ಎಸ್.ನಲ್ಲಿ ಸರ್ಕಾರಕ್ಕೆ ತಪ್ಪು ಮಾಹಿತಿ: ಪ್ರತಿಭಟನೆ



» **ಚಿತ್ರದುರ್ಗ**

ಚಳ್ಳಕೆರೆ ತಾಲ್ಲೂಕು ಕಸಬಾ ಹೋಬಳಿ ಸೋಮಗುದ್ದು ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಸೇರಿದ ಏಳು ಗ್ರಾಮಗಳಲ್ಲಿ ಬೆಳೆ ಸಮೀಕ್ಷೆ ಜಿ.ಪಿ.ಎಸ್. ಮಾಡುವಾಗ ಅಧಿಕಾರಿಗಳ ಬೇಜವಾಬ್ದಾರಿತನದಿಂದ ಸರ್ಕಾರಕ್ಕೆ ತಪ್ಪು ಮಾಹಿತಿ ನೀಡಿರುವುದನ್ನು ವಿರೋಧಿಸಿ ಕರ್ನಾಟಕ ರಾಜ್ಯ ರೈತ ಸಂಘದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಸಲಾಯಿತು.

ಚಿಕ್ಕಮಧುರೆ, ಹಿರೇಮಧುರೆ, ಉಪ್ಪಾರಹಟ್ಟಿ, ಚಿಗತನಹಳ್ಳಿ, ಗಂಜಿಗುಂಟೆ, ಲಂಬಾಣಿಹಟ್ಟಿ, ಕನ್ನೇನಹಳ್ಳಿ ಗ್ರಾಮಗಳ ರೈತರು ತೊಗರಿ ಮತ್ತು ಶೇಂಗಾಕ್ಕೆ ಬೆಳೆವಿಮೆ ಮೊತ್ತವನ್ನು ಪಾವತಿಸಿದ್ದರೂ ಸಹ ಮಳೆ ಸುರಿದು ಬೆಳೆ ಸಮೃದ್ದವಾಗಿದೆ ಎಂದು ಅಧಿಕಾರಿಗಳು ಬೆಳೆ ಸಮೀಕ್ಷೆಯಲ್ಲಿ ಸರ್ಕಾರಕ್ಕೆ ತಪ್ಪು ಮಾಹಿತಿ ನೀಡಿರುವುದರಿಂದ ರೈತರ ಖಾತೆಗಳಿಗೆ ಬೆಳೆವಿಮೆ ಜಮಾ ಆಗಿರುವುದಿಲ್ಲ. ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಮಾಡಿದ ರೈತರು ಸಮಯಕ್ಕೆ ಸರಿಯಾಗಿ ಮಳೆ ಬಾರದ ಕಾರಣ ಬೆಳೆಹಾನಿಯಿಂದ ಕೈಸುಟ್ಟುಕೊಂಡಿದ್ದಾರೆ. ಚಳ್ಳಕೆರೆ ತಾಲ್ಲೂಕಿನ ಎಲ್ಲಾ ಪಂಚಾಯಿತಿಗಳಿಗೂ ಬೆಳೆವಿಮೆ ಪರಿಹಾರವನ್ನು ಸರ್ಕಾರ ಮತ್ತು ಬೆಳೆವಿಮೆ ಕಂಪನಿಗಳು ನೀಡಿದ್ದು, ಸೋಮಗುದ್ದು ಗ್ರಾಮ ಪಂಚಾಯಿತಿಗೆ ಮಾತ್ರ ಬೆಳೆವಿಮೆ ಸಿಕ್ಕಿಲ್ಲ. ಒಂದು ವಾರದೊಳಗಾಗಿ ದಿನ ನಿಗಧಿಪಡಿಸಿ ಎಲ್ಲಾ ಇಲಾಖೆ ಅಧಿಕಾರಿಗಳನ್ನು ಕರೆಸಿ ನಷ್ಟ ಅನುಭವಿಸಿರುವ ರೈತರ ಖಾತೆಗಳಿಗೆ ಬೆಳೆವಿಮೆ ಜಮಾ ಮಾಡಬೇಕು. ಇಲ್ಲವಾದಲ್ಲಿ ಉಗ್ರ ಹೋರಾಟ ನಡೆಸಲಾಗುವುದೆಂದು ಪ್ರತಿಭಟನಾನಿರತ ರೈತರು ಜಿಲ್ಲಾಡಳಿತಕ್ಕೆ ಗಡುವು ನೀಡಿದರು. ಕರ್ನಾಟಕ ರಾಜ್ಯ ರೈತ ಸಂಘದ ಉಪಾಧ್ಯಕ್ಷ ಕೆ.ಪಿ.ಭೂತಯ್ಯ, ಜಿಲ್ಲಾಧ್ಯಕ್ಷ ಬಸ್ತಿಹಳ್ಳಿ ಜಿ.ಸುರೇಶ್‌ಬಾಬು, ತಾಲ್ಲೂಕು ಅಧ್ಯಕ್ಷ ಧನಂಜಯ, ಜಿಲ್ಲಾ ಉಪಾಧ್ಯಕ್ಷ ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಪ್ರಶಾಂತ, ಕೆಂಚಪ್ಪ, ತಿಪ್ಪೇಸ್ವಾಮಿ, ಎಸ್.ನಾಗರಾಜ, ಶಶಿಧರ್, ಬಿ.ಟಿ.ಚಿದಾನಂದ, ಬಿ.ಶಿವಣ್ಣ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಸ್ಕೂಟಿಯಲ್ಲಿದ್ದ ಒಂದು ಲಕ್ಷ ನಗದು ಹಣವನ್ನು ಹಾಡುಹಗಲೇ ಲಪಟಾಯಿಸಿದ ಕಳ್ಳರು: ನಗರಸಭೆಯ ಮುಂಭಾಗದಲ್ಲೇ ನಡೆದ ಘಟನೆ

» **ಚಳ್ಳಕೆರೆ**

ನಗರದ ಖಾಸಗಿ ನರ್ಸಿಂಗ್ ಹೋಂನಲ್ಲಿ ಕಾರ್ಯನಿರ್ವಹಿಸುತ್ತಿರುವ ಮಂಜುನಾಥ ಎಂಬ ವ್ಯಕ್ತಿ ಚಿತ್ರದುರ್ಗ ರಸ್ತೆಯಲ್ಲಿರುವ ಕೆನರಾ ಬ್ಯಾಂಕ್‌ನಲ್ಲಿ ಖಾತೆಯಿಂದ ಒಂದು ಲಕ್ಷ ಹಣವನ್ನು ಡ್ರಾ ಮಾಡಿ ತನ್ನ ಸ್ಕೂಟಿ ವಾಹನದಲ್ಲಿಟ್ಟು ನಗರಸಭೆ ಕಚೇರಿಗೆ ಆಗಮಿಸಿ ಕಚೇರಿಯಲ್ಲಿ ಕೆಲಸ ಮುಗಿಸಿಕೊಂಡು ವಾಪಾಸ್ ಬರುವಷ್ಟರಲ್ಲಿ ಸ್ಕೂಟಿಯ ಡಿಕ್ಕಿಯಲ್ಲಿದ್ದ ಹಣವನ್ನು ಯಾರೋ ಕಳ್ಳರು ಲಪಟಾಯಿಸಿದ್ದಾರೆ.

ಗಾಬರಿಗೊಂಡ ಮಂಜುನಾಥ ಕೂಡಲೇ ಪೊಲೀಸ್ ಠಾಣೆಗೆ ತೆರಳಿ ದೂರು ನೀಡಿರುತ್ತಾನೆ.

ನಗರಸಭೆಯ ಸಿಸಿ ಟಿವಿಯ ದೃಶ್ಯ ಪರಿಶೀಲನೆ ನಡೆಸಿದಾಗ ಸ್ಪಷ್ಟವಾಗಿ ಗೋಚರವಾಗಿಲ್ಲ. ಪೊಲೀಸರು ಹಣ ಕಳ್ಳತನವಾದ ಬಗ್ಗೆ ಪ್ರಕರಣ ದಾಖಲಿಸಿದ್ದಾರೆ.

---

**ಪ್ರಮುಖ ಸುದ್ದಿ**

# ಮಗುವಿನ ಮುಗ್ದತೆ ಇದ್ದರೆ ಬದುಕಿನಲ್ಲಿ ಸಂತೋಷ

» **ಹೊಸದುರ್ಗ**

ಮಕ್ಕಳು ಸದಾ ಲವಲವಿಕೆಯಿಂದ, ಚಟುವಟಿಕೆಯಿಂದ ಅನೇಕ ಪ್ರಶ್ನೆಗಳನ್ನು ಕೇಳುವರು. ಮಕ್ಕಳ ಜೀವನವೇ ಒಂದು ಸೌಭಾಗ್ಯ. ಮನುಷ್ಯ ಯಾವಾಗಲೂ ನಗುನಗುತಾ ಇರಬೇಕು ಎಂದು ಸಾಣೆಹಳ್ಳಿ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು. ಇಲ್ಲಿನ ಎಸ್ ಎಸ್ ರಂಗ ಮಂದಿರದಲ್ಲಿ ಆಯೋಜಿಸಿದ್ದ 'ಮಕ್ಕಳ ಹಬ್ಬ' ಬೇಸಿಗೆ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದರು.

ಮಗುವಿನ ಮುಗ್ದತೆ ಇದ್ದರೆ ಬದುಕಿನಲ್ಲಿ ಸಂತೋಷ ಕಾಣಬಹುದು. ಮಕ್ಕಳ ಮನಸ್ಸು ಹಸಿ ಗೋಡೆ ಇದ್ದಂತೆ. ಹಿಡಿದುಕೊಳ್ಳುತ್ತೆ. ಹಾಗೆಯೇ ಮಕ್ಕಳ ಮನಸ್ಸು ಹಸಿಗೋಡೆಯಿದ್ದಂತೆ. ಅವರಿಗೆ ಏನೇ ವಿಷಯ ಕಲಿಸಿದರೂ ತಕ್ಷಣ ಹಿಡಿದಿಟ್ಟುಕೊಳ್ಳುವ ಸಾಮರ್ಥ್ಯ ಹೊಂದಿರುತ್ತಾರೆ. ಎಂತಹ ವಿಷಯಗಳನ್ನು ಬಿತ್ತಬೇಕು ಎನ್ನುವ ಅರಿವು ಬಿತ್ತುವಂಥವರಿಗೆ ಇರಬೇಕು. ಮಕ್ಕಳು ಸಾಂಸ್ಕೃತಿಕ ಶ್ರೀಮಂತಿಕೆಯ ನೆಲೆಗಟ್ಟಿನಲ್ಲಿ ಬದುಕನ್ನು ಕಟ್ಟಿಕೊಳ್ಳಬೇಕು. ಮಕ್ಕಳಿಗೆ ಪ್ರೋತ್ಸಾಹ ಸಿಕ್ಕರೆ ಏನು ಏಕಾದರೂ ಸಾಧಿಸಬಹುದು. ಸಾಧನೆ ಸಾಧಕನ ಸ್ವತ್ತೇ ಹೊರತು ಸೋಮಾರಿಯ ಸ್ವತ್ತಲ್ಲ.

ಮನುಷ್ಯ ಪ್ರಯತ್ನ ಪಟ್ಟರೆ ಮುಂದೆ ಒಂದು ದಿನ ಫಲ ಸಿಕ್ಕೇ ಸಿಗುತ್ತೆ. ಯಾವ ಮಕ್ಕಳು ದಡ್ಡರೆಂದು ಭಾವಿಸಬಾರದು. ಅವರಿಗೆ ಬೆನ್ನು ತಟ್ಟಿದರೆ, ಪ್ರೋತ್ಸಾಹಿಸಿದರೆ ಬಹಳ ಎತ್ತರ ಸ್ಥಾನಕ್ಕೆ ಏರಲು ಸಾಧ್ಯ. ಆದ್ದರಿಂದ ದಡ್ಡರೂ ಬುದ್ಧಿವಂತರಾಗಲಿಕ್ಕೆ ಸಾಧ್ಯ ಇದೆ. ಬೇಸಿಗೆ ಶಿಬಿರ ಮಕ್ಕಳ ಭವಿಷ್ಯವನ್ನು ರೂಪಿಸಿಕೊಳ್ಳಬಹುದು. ಮಕ್ಕಳ ಆಸಕ್ತಿಯನ್ನು ಅರಳಿಸುವ ಹಾಗೆ ಸಂಚಾಲಕು ನೋಡಿಕೊಳ್ಳಬೇಕು. ಮಾನವೀಯ ಅಂತಃಕರಣದ ಗುಣಗಳನ್ನು ನೀವೆಲ್ಲರೂ ಬೆಳೆಸಿಕೊಳ್ಳಬೇಕು. ತಾಳ್ಮೆಗಿಂತ ದೊಡ್ಡ ಅಸ್ತ್ರ ಮತ್ತೊಂದಿಲ್ಲ. ಅಂತಹ ತಾಳ್ಮೆ ನಮ್ಮ ವಿದ್ಯಾರ್ಥಿಗಳು ಮತ್ತು ಪೋಷಕರು ಮೈಗೂಡಿಸಿಕೊಳ್ಳಬೇಕು ಎಂದರು.



ಪ್ರೊ. ಚಂದ್ರಶೇಖರ್ ಮಾತನಾಡಿ ಮಕ್ಕಳ ಪ್ರತಿಭೆಗೆ ನೀರೆರೆದು ಅದನ್ನು ಪೋಷಣೆ ಮಾಡ್ತಾ ಬಂದಿರುವುದು ಸಾಣೇಹಳ್ಳಿ ಶ್ರೀಗಳು ಹಾಗೂ ಶ್ರೀಮಠ. ಸಾಧನೆಗೆ ಯಾವುದೇ ಮಿತಿ ಇಲ್ಲ. ಅದು ಸಾಧಕನ ಸ್ವತ್ತು. ಮಕ್ಕಳನ್ನು ಪ್ರೀತಿಸ್ಬೇಕು. ಅವರ ತುಂಟತವನ್ನು ನೋಡಿ ಸಂತೋಷ ಪಡಬೇಕು. ಬುದ್ಧಿವಂತರಿಗಿಂತ ಹೃದಯವಂತರು ಬೇಕು. ಹೃದಯವಂತಿಕೆ ಕಲೆಗಳ ಮೂಲಕ ಲಬಿಸುತ್ತದೆ. ಬರೀ ಓದ್ತಾ ಓದ್ತಾ... ಹೋದರೆ ಯಾಂತ್ರಿಕ ವ್ಯಕ್ತಿಯಾಗುವರು. ಮಕ್ಕಳಲ್ಲಿ ಋಣಾತ್ಮಕ ವಿಷಯದ ಬಗ್ಗೆ ಮಾತನಾಡಿ. ಎಂದರು.

ಅಭಿನಂದನೆ ಸ್ವೀಕರಿಸಿ ಮಾತನಾಡಿದ ಸಿ ಭರತ್ ಐ ಎ ಎಸ್ ಎಲ್ಲ ಪೋಷಕರು ಚಿಕ್ಕಮಕ್ಕಳು ಹೇಗೆ ಯೋಚನೆ ಮಾಡಬೇಕು ಎನ್ನುವುದು ಕಲಿಸಿಕೊಡಬೇಕು. ಆಗ ಆ ಮಗು ಮುಂದೆ ಅಂದುಕೊಂಡ ಸಾಧನೆಯನ್ನು ಮಾಡಲಿಕ್ಕೆ ಸಾಧ್ಯ. ಮಕ್ಕಳು ಈಗಿನಿಂದಲೇ ಗುರಿಯನ್ನು ದೊಡ್ಡದಾಗಿಟ್ಟುಕೊಳ್ಳಬೇಕು. ಎಲ್ಲ ಕೆಲಸಗಳಲ್ಲೂ ತನ್ನದೇ ಆದ ಜವಾಬ್ದಾರಿ ಇದೆ. ಯಾವುದೇ ಕೆಲಸ ಮೇಲಲ್ಲ, ಕೀಳಲ್ಲ. ಪ್ರತಿಯೊಬ್ಬರು ದಿನಚರಿಗೆ ತಕ್ಕಂತೆ ಯೋಜನೆ ಹಾಕಿಕೊಂಡು ಕಾರ್ಯರೂಪಕ್ಕೆ ತರಬೇಕು. ಇಲ್ಲಿರುವ ಎಲ್ಲ ವಿದ್ಯಾರ್ಥಿಗಳು ಗೆಳೆಯರ ಬಳಗವನ್ನು ಸರಿಯಾದ ರೀತಿಯಲ್ಲಿ ಸದ್ಬಳಕೆ ಮಾಡಿಕೊಳ್ಳಬೇಕು. ಒಳ್ಳೆಯ ಪುಸ್ತಕಗಳನ್ನು ಓದಿದರೆ, ಹಾಡನ್ನು ಕೇಳಿದರೆ ನಮ್ಮ ಮನಸ್ಸು ಒತ್ತಡದಿಂದ ದೂರವಿರಬಹುದು. ಬಸವತತ್ವದ ವಿಚಾರಗಳನ್ನು ಪ್ರತಿಯೊಬ್ಬರು ಅರಿತುಕೊಳ್ಳಬೇಕು. ಮಠದಲ್ಲಿ ಓದಿದರೆ ಶಿಕ್ಷಣದ ಜೊತೆಗೆ ಸಂಸ್ಕಾರ ಕೊಡುತ್ತದೆ ಎಂದರು

ಮುಖ್ಯ ಅತಿಥಿಗಳಾಗಿ ಬಸವರಾಜ ನೆಲ್ಲಿಸರ ಮಾತನಾಡಿ ಶ್ರಮ, ಶ್ರದ್ಧೆ, ಶಿಸ್ತು ಇದ್ದರೆ ಜೀವನದಲ್ಲಿ ಏನಾದರೂ ಸಾಧನೆ ಮಾಡಲಿಕ್ಕೆ ಸಾಧ್ಯ. ಕರುಣೆ ದಯೆ, ವಾತ್ಸಲ್ಯ, ಶಿಸ್ತು, ಸಂಯಮ ಇವೆಲ್ಲವೂ ಸಾಣೇಹಳ್ಳಿಯ ಶ್ರೀಗಳಲ್ಲಿದೆ. ಇವೆಲ್ಲವೂ ಮೈಗೂಡಿಸಿಕೊಂಡಿದ್ದರಿಂದಲೇ ಸಮಾಜದಲ್ಲಿ ಇಷ್ಟೆಲ್ಲಾ ಸಾಧನೆ ಮಾಡಲಿಕ್ಕೆ ಸಾಧ್ಯ. ನಮ್ಮಲ್ಲಿ ಇರುವ ಜ್ಞಾನಾರ್ಜನೆಯನ್ನು ಬಳಸಿಕೊಳ್ಳಬೇಕು ಎಂದರು.

ಶಿಬಿರಾರ್ಥಿಗಳಿಂದ ವಚನ ಗಾಯನ, ಯೋಗ ಪ್ರಾತ್ಯಕ್ಷಿಕೆ, ನೃತ್ಯರೂಪಕ ವಚನಾಮೃತ, ನಾಟಕಗಳು: ನಾಯಿ ಮರಿ, ಗೋರುಕಾನ, ಪುಟ್ಟ ಕತೆ, ಬುದ್ಧಿವಂತ ಮಂಕಿ, ನಚಿಕೇತಾಗ್ನಿ ಪ್ರದರ್ಶನಗೊಂಡವು. ಶಿವಸಂಚಾರದ ಕಲಾವಿದರು ವಚನಗೀತೆಗಳನ್ನು ಹಾಡಿದರು.

## ಫಾಸ್ಟ್ ನ್ಯೂಸ್

### ಬೇಸಿಗೆಯ ರಣರಣ ಬಿರುಬಿಸಿಲಿಗೆ ವೃದ್ದೆ ಬಲಿ

» **ಚಳ್ಳಕೆರೆ**

ಕಳೆದ ಹಲವಾರು ವರ್ಷಗಳಿಗೆ ಹೋಲಿಸಿದಲಿ ಪ್ರಸ್ತುತ 2024ರ ಬೇಸಿಗೆಯ ಉರಿಬಿಸಿಲು ಜನರ ಪ್ರಾಣಕ್ಕೆ ಕಂಟಕ ತಂದಿದೆ ಎನ್ನಬಹುದಾಗಿದೆ. ವಿಶೇಷವಾಗಿ ಬೆಳಗ್ಗೆ 9ರಿಂದ ಮದ್ಯಾಹ್ನ 4ರ ತನಕ ರಸ್ತೆಗಳಲ್ಲಿ ಸಾರ್ವಜನಿಕರ ಓಡಾಟವೇ ವಿರಳವಾಗಿರುತ್ತದೆ. ಕಾರಣ ಈ ಬಾರಿ ಚಳ್ಳಕೆರೆ ನಗರದಲ್ಲಿ ಎಂದಿಗೂ ಕಾಣದಂತಹ ಉರಿ ಬಿಸಿಲನ್ನು ಕಾಣಬಹುದಾಗಿದೆ. ಕಳೆದ ಮೂರು ದಿನಗಳಿಂದ ಚಳ್ಳಕೆರೆ ನಗರದಲ್ಲಿ 38ರಿಂದ41ರ ತನಕ ಬಿಸಿಲಿನ ತಾಪಮಾನ ಹೆಚ್ಚಾಗಿದೆ. ಸೋಮವಾರ ಮದ್ಯಾಹ್ನ ಚಳ್ಳಕೆರೆಯಿಂದ ನನ್ನಿವಾಳ ಕಡೆ ಅಜ್ಜಯ್ಯನಗುಡಿ ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದ ನನ್ನಿವಾಳ ಗ್ರಾಮದ ರತ್ನಮ್ಮ(76) ಎಂಬ ವೃದ್ದೆ ರಸ್ತೆಯಲ್ಲಿ ನಡೆಯುವಾಗ ಬಿಸಿಲಿನ ಝಳಕ್ಕೆ ಎರಡೂ ಕಾಲುಗಳಲ್ಲಿ ಬೊಬ್ಬೆ ಬಂದಿದ್ದು, ಮುಂದಕ್ಕೆ ಚಲಿಸಲಾಗದೆ ರಸ್ತೆಯಲ್ಲೇ ಬಿದ್ದು ಮೃತಪಟ್ಟಿರುತ್ತಾಳೆ. ಈ ವರ್ಷದ ಬೇಸಿಗೆ ಬಿಸಿಲು ವೃದ್ದೆಯನ್ನು ಬಲಿತೆಗೆದುಕೊಂಡಂತಾಗಿದೆ.

### ಸಂಭ್ರಮದಿಂದ ನಡೆದ ಬೇವಿನಳಮ್ಮ ರಥೋತ್ಸವ



» **ಹೊಸದುರ್ಗ**

ತಾಲೂಕಿನ ಮಾಡದಕೆರೆ ಹೋಬಳಿಯ ಬೇವಿನಹಳ್ಳಿ ಗ್ರಾಮದ ಬೆಟ್ಟದ ಮೇಲೆ ನೆಲೆಸಿರುವ ಶಕ್ತಿ ದೇವತೆ ಶ್ರೀ ಬೇವಿನಹಳ್ಳಿ ಕರಿಯಮ್ಮ (ಬೇವಿನಳಮ್ಮ) ದೇವಿಯ ರಥೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ಅತ್ಯಂತ ಸಂಭ್ರಮ ಸಡಗರದಿಂದ ನಡೆಯಿತು. ರಥೋತ್ಸವಕ್ಕೂ ಮುನ್ನ ಅಮ್ಮನವರ ಉತ್ಸವ ಮೂರ್ತಿಯನ್ನು ದೇವಾಲಯದಿಂದ ರಾಜ ಮರ್ಯಾದೆಗಳೊಂದಿಗೆ ವಾದ್ಯಗಳ ಮೂಲಕ ರಥದ ಬೀದಿಗೆ ಕರೆತರಲಾಯಿತು. ರಥ ಏರುವುದಕ್ಕೂ ಮುನ್ನ ಅರ್ಧ ಗಂಟೆಗೂ ಹೆಚ್ಚು ಕಾಲ ಅಮ್ಮನವರ ಮದಾಲ್ಲೆ ನಡೆಯಿತು. ರಥೋತ್ಸವಕ್ಕೆ ಬಂದಿದ್ದ ಭಕ್ತರು ಶ್ರದ್ಧಾಭಕ್ತಿಯಿಂದ ರಥ ಎಳೆದು, ಹೂ, ಉತ್ತುತ್ತಿ, ನಾಣ್ಯ ಮತ್ತು ಬಾಳೆ ಹಣ್ಣುಗಳನ್ನು ತರುವ ಮೂಲಕ ಭಕ್ತಿ ಸಮರ್ಪಿಸಿದರು. ಈ ವೇಳೆ ಸೋಮ ದೇವರುಗಳ ಕುಣಿತ ಸೇರಿದ್ದ ಭಕ್ತರ ಕಣ್ಮನ ಸೆಳೆಯಿತು.ಪ್ರತಿವರ್ಷದಂತೆ ಈ ವರ್ಷವೂ ಕೂಡ ಧ್ವಜಾರೋಹಣ, ಭೇರಿತಾಂಡನ, ಅಂಕುರಾರ್ಪಣೆ ಸೇವೆ, ಮದಲಿಂಗಿತ್ತಿ ಶಾಸ್ತ್ರ, ಚಪ್ಪರಸೇವೆ, ಉಯ್ಯಾಲೆ ಉತ್ಸವ, ಜಲದಿ ಗಂಗಸ್ನಾನ, ಮದಾಲ್ಲೆ ಉತ್ಸವ, ಹೂವಿನ ಉತ್ಸವ, ಸರಗಂಬಲಿ ಸೇವೆ, ಗದ್ದುಗೆ ಕಂಬಳಿ ಸೇವೆ, ಉಯ್ಯಾಲೆ ಉತ್ಸವ ಮತ್ತು ಇನ್ನಿತರ ಧಾರ್ಮಿಕ ಕಾರ್ಯಗಳು ನಡೆದವು. ಅದರಂತೆಯೇ, ಬೇವಿನಹಳ್ಳಿ ಸೇರಿದಂತೆ ಸುತ್ತಮುತ್ತಲ ಗ್ರಾಮಗಳ ಸಾವಿರಾರು ಭಕ್ತರ ಸಮ್ಮುಖದಲ್ಲಿ ರಥೋತ್ಸವವೂ ಸಂಭ್ರಮ ಸಡಗರದಿಂದ ನಡೆಯಿತು.

### ಇಂದು ಅವದೂತ ಸದ್ಗುರು ಶ್ರೀ ಬಿಂದುಮಾಧವ ಶರ್ಮ ಸ್ವಾಮಿಜಿ ಅವರ 78 ನೇ ಜಯಂತಿ ಮಹೋತ್ಸವ

» **ಹೊಸದುರ್ಗ**

ತಾಲೂಕಿನ ಬೆಲಗೂರು ಗ್ರಾಮದ ವಸಿಷ್ಠಾಶ್ರಮದ ಶ್ರೀ ಬಿಂದುಮಾಧವ ಅದಿಷ್ಠಾನ ಮಂದಿರದಲ್ಲಿ ಏಪ್ರೀಲ್ 30 ರಂದು ಮಂಗಳವಾರ ಅವದೂತ ಸದ್ಗುರು ಶ್ರೀ ಬಿಂದುಮಾಧವ ಶರ್ಮ ಸ್ವಾಮಿಜಿ ಅವರ 78 ನೇ ಜಯಂತಿ ಮಹೋತ್ಸವ ವಿಜೃಂಭಣೆಯಿಂದ ನೆರವೇರಲಿದೆ. ಮಂಗಳವಾರ ಮುಂಜಾನೆಯಿಂದ ಸಂಜೆಯವರೆಗೆ ಶ್ರೀ ಅದಿಷ್ಠಾನ ಮಂದಿರದಲ್ಲಿ ಜಯಂತಿಯ ವಿಶೇಷ ಕಾರ್ಯಕ್ರಮಗಳು ಜರುಗಲಿವೆ. ಸಿಂದಗಿ ಬೀಮಾಶಂಕರ ಮಠದ ಶ್ರೀ ದತ್ತಪ್ಪಯ್ಯ ಸ್ವಾಮಿಜಿ ಹಾಗೂ ಹೊಸದುರ್ಗದ ಸದ್ಗುರು ಆಶ್ರಮದ ಶ್ರೀ ಕಾಂತಾನಂದ ಸರಸ್ವತಿ ಸ್ವಾಮಿಜಿ ಕಾರ್ಯಕ್ರಮದ ಸಾನಿದ್ಯವಹಿಸಲಿದ್ದಾರೆ. ಮುಂಜಾನೆ ಲೋಕ ಕಲ್ಯಾಣಾರ್ಥವಾಗಿ ವಿಶೇಷ ಶ್ರೀ ಮೇದಾ ದಕ್ಷಿಣಾ ಮೂರ್ತಿ ಹೋಮ ಹಾಗೂ ಅವಹಂತೀ ಹೋಮ, ಪೂರ್ಣಾಹುತಿ ಕಾರ್ಯಕ್ರಮಗಳು ನಡೆಯಲಿವೆ.ಬೆಳಿಗ್ಗೆ 11 ಗಂಟೆಗೆ ಬಿಂದುಮಾಧವ ಶರ್ಮ ಸ್ವಾಮಿಜಿ ಅವರ ಸ್ಥಿರ ಹಾಗೂ ಚರ ಪಾದುಕೆಗಳಿಗೆ ರುದ್ರಾಭಿಷೇಕ, ಅಲಂಕಾರ ಪೂಜೆ, ಮಹಾ ನೈವೆದ್ಯ, ಮಹಾ ಮಂಗಳಾರತಿ, ಅಭಯಾನುಗ್ರಹ ಕಾರ್ಯಕ್ರಮಗಳು ನಡೆಯಲಿವೆ. ಬಿಂದುಮಾಧವ ಅದಿಷ್ಠಾನ ಮಂದಿರದ ಮುಖ್ಯಸ್ಥ ಗುರದತ್ತ ಶರ್ಮ ಮಾತನಾಡಿ ಅವದೂತ ಬಿಂದುಮಾಧವ ಶರ್ಮ ಶ್ರೀಗಳ 78 ವರ್ಷದ ಜಯಂತಿ ಮಹೋತ್ಸವವನ್ನು ಭಕ್ತರ ಒತ್ತಾಸೆಯ ಮೇರೆಗೆ ಏ.30 ರಂದು ಅವರ ಅದಿಷ್ಠಾನ ಮಂದಿರದಲ್ಲಿ ಆಯೋಜಿಸಲಾಗಿದೆ. ಗುರುಗಳ ಅರಾಧನೆ ಹಾಗೂ ಲೋಕಕಲ್ಯಾಣಾರ್ಥವಾಗಿ ವಿಶೆಷವಾದ ದಕ್ಷಿಣಮೂರ್ತಿ ಹೋಮವನ್ನು ನಡೆಸಲಾಗುವುದು ಎಂದರು. ಗುರುಗಳು ಅದಿಷ್ಠಾನ ಮಂದಿರದಲ್ಲಿ ಚೈತನ್ಯ ಸ್ವರೂಪರಾಗಿ ಭಕ್ತರಿಗೆ ಅಭಾಯನುಗ್ರಹ ನೀಡುತ್ತಿದ್ದಾರೆ. ಅವರ ಶಕ್ತಿಯ ಫಲವಾಗಿ ಧಾರ್ಮಿಕ ಕಾರ್ಯಕ್ರಮಗಳು ನಡೆಯುತ್ತಿವೆ. ಹೆಚ್ಚಿನ ಸಂಖ್ಯೆ ಭಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಗುರುಗಳ ಕೃಪಾಶೀವಾದ ಪಡೆಯಬೇಕು ಎಂದರು.

# ಲೋಕಸಭಾ ಚುನಾವಣೆ, ನಮ್ಮ ನಡೆ ಮತಗಟ್ಟೆ ಕಡೆ, ತಪ್ಪದೇ ಮೇ 7 ರಂದು ಮತದಾನ ಮಾಡಲು ಕರೆ





» **ದಾವಣಗೆರೆ**

ಲೋಕಸಭಾ ಚುನಾವಣೆನಡೆಯುತ್ತಿದ್ದು ಮೇ 7 ರಂದು ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ಮತದಾನ ನಡೆಯಲಿದೆ. ಮತದಾರರು ತಪ್ಪದೇ ಮತಗಟ್ಟೆ ಕಡೆ ಬಂದು ಮತದಾನ ಮಾಡಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಸ್ವೀಪ್ ಸಮಿತಿ ಅಧ್ಯಕ್ಷರಾದ ಸುರೇಶ್ ಬಿ.ಇಟ್ನಾಳ್ ತಿಳಿಸಿದರು.

ಅವರು ಭಾನುವಾರ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್ ಹಾಗೂ ವಿವಿಧ ಶಾಲಾ, ಕಾಲೇಜುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾದ ನಮ್ಮ ನಡೆ, ಮತಗಟ್ಟೆ ಕಡೆ ಜಾಥಾವನ್ನು ಗುಂಡಿ ಸರ್ಕಲ್ ನಿಂದ ಸ್ಟೇಡಿಯಂವರೆಗೆ ನಡೆದ ಮತದಾನ ಜಾಗೃತಿ ಮೆರವಣಿಗೆ ಸ್ಟೇಡಿಯಂನಲ್ಲಿ ಸಮಾರೋಪವಾಗಿ ನಂತರ ಇಲ್ಲಿ ಸ್ವೀಪ್ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು. ಜಿಲ್ಲೆಯಲ್ಲಿನ ಎಲ್ಲಾ 1693 ಮತಗಟ್ಟೆಗಳಲ್ಲಿ ಕುಡಿಯುವ ನೀರು, ನೆರಳು, ಶೌಚಾಲಯದ ವ್ಯವಸ್ಥೆ, ರ್‍ಯಾಂಪ್‌ಗಳು ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ. ಮತದಾರರು ಮತಗಟ್ಟೆ ಕಡೆ ಬಂದು ಪರಿಶೀಲಿಸಿಕೊಳ್ಳಬಹುದಾಗಿದೆ. ಏ.28 ರಂದು ಜಿಲ್ಲೆಯ ಎಲ್ಲಾ ಮತಗಟ್ಟೆಗಳ ಮೇಲೆ ಸ್ವೀಪ್ ಧ್ವಜವನ್ನು ಹಾರಿಸಲಾಗಿದೆ.

ಇದುವರೆಗೆ ನಡೆದ ಸ್ವೀಪ್ ಕಾರ್ಯಕ್ರಮದಲ್ಲಿ ಎಲ್ಲಾ ಕಾಲೇಜಿನ ವಿದ್ಯಾರ್ಥಿಗಳು ಬಹಳ ಉತ್ಸುಕತೆಯಿಂದ ಭಾಗವಹಿಸಿದ್ದಾರೆ. ಇದೇ ರೀತಿ ಮತದಾನದ ದಿನವು ಬೆಳಗ್ಗೆ 7 ಗಂಟೆಯಿಂದಲೇ ಮತಗಟ್ಟೆಯಲ್ಲಿ ಸರದಿ ಸಾಲಿನಲ್ಲಿ ನಿಂತು ಮತ ಹಾಕಬೇಕು. ಮೊದಲ ಹಂತದಲ್ಲಿ ನಡೆದ ಚುನಾವಣೆಯಲ್ಲಿ ಮಂಡ್ಯ ಕ್ಷೇತ್ರದಲ್ಲಿ ಹೆಚ್ಚು ಶೇ 81.64 ರಷ್ಟು ಮತದಾನವಾಗಿದ್ದು ಇದಕ್ಕೂ ಮೀರಿಸಿ ದಾವಣಗೆರೆ ಕ್ಷೇತ್ರದಲ್ಲಿ ಮತದಾನ ನಡೆಯಬೇಕಾಗಿದೆ. ಈ ನಿಟ್ಟಿನಲ್ಲಿ ಎಲ್ಲರೂ ಬಹಳ ಉತ್ಸುಕತೆಯಿಂದ ಮೇ 7 ರಂದು ನಡೆಯುವ ಮತದಾನದಲ್ಲಿ ಭಾಗಿಯಾಗಬೇಕಾಗಿದೆ ಎಂದರು.

ದಾವಣಗೆರೆ ಲೋಕಸಭಾ ಕ್ಷೇತ್ರದಲ್ಲಿ 1709244 ಮತದಾರರಿದ್ದು ಇದರಲ್ಲಿ ದಾವಣಗೆರೆ ಜಿಲ್ಲೆಯ 14,85,271 ಮತದಾರರಿದ್ದಾರೆ. ಲಿಂಗಾನುಪಾತದನ್ವಯ ಪುರುಷರಿಗಿಂತ ಮಹಿಳಾ ಮತದಾರರು ಜಿಲ್ಲೆಯಲ್ಲಿ ಹೆಚ್ಚಿದ್ದು 1000 ಪುರುಷರಿಗೆ 1006 ಮಹಿಳೆಯರಿದ್ದಾರೆ, ಮಹಿಳೆಯರು ಮತದಾನದಲ್ಲಿ ಭಾಗಿಯಾಗವುದರಿಂದ ಹೆಚ್ಚು ಮತದಾನವಾಗುವ ವಿಶ್ವಾಸವಿದೆ ಎಂದರು. ಸ್ವೀಪ್ ರಾಯಭಾರಿ ಹಾಗೂ ಚಿತ್ರ ನಟ ಪೃಥ್ವಿ ಶಾಮನೂರು ಮಾತನಾಡಿ ಮತದಾನ ದಿನ ಎಲ್ಲರಿಗೂ ಮತದಾನ ಮಾಡಲೆಂದು ರಜಾ ನೀಡಲಾಗುತ್ತದೆ. ಆದರೆಬೇರೆಲ್ಲೂಹೋಗದೇಮತದಾನದಲ್ಲಿ ಭಾಗಿಯಾಗಬೇಕೆಂದರು. ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ್ ಪ್ರಾಸ್ತಾವಿಕವಾಗಿ ಮಾತನಾಡಿ ಮತದಾರರ ಪ್ರತಿಜ್ಞಾವಿಧಿ ಬೋಧಿಸಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ; ಷಣ್ಮುಖಪ್ಪ, ಶಾಲಾ ಶಿಕ್ಷಣ ಪದವಿ ಪೂರ್ವ ವಿಭಾಗದ ಉಪನಿರ್ದೇಶಕ ಕರಿಸಿದ್ದಪ್ಪ, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಉಪನಿರ್ದೇಶಕ ಕೊಟ್ರೇಶ್, ಯುವಜನ ಸೇವಾ ಹಾಗೂ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ಜಯಲಕ್ಷ್ಮಿ ಬಾಯಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಮಂಗಳನಾಯ್ಕ್ ಹಾಗೂ ವಿವಿಧ ಶಾಲೆಗಳ ಶಿಕ್ಷಕರು ಹಾಗೂ ಇನ್ನಿತರೆ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ನಮ್ಮ ನಡೆ ಮತಗಟ್ಟೆ ಕಡೆ ಅಂಗವಾಗಿ 20 ಕೆ.ಜಿ.ಕೇಕ್ ತಯಾರಿಸಿದ್ದು ಕೇಕ್ ಕತ್ತರಿಸುವ ಮೂಲಕ ಸಿಹಿ ಹಂಚಿಕೆ ಮಾಡಲಾಯಿತು.

## ಭೋವಿ ಗುರುಪೀಠಕ್ಕೆ ಗೀತಾ ಶಿವರಾಜಕುಮಾರ ಭೇಟಿ

» **ಚಿತ್ರದುರ್ಗ**



ಇಲ್ಲಿನ ಶ್ರೀ ಜಗದ್ಗುರು ಸಿದ್ದರಾಮೇಶ್ವರ ಮಹಾಸಂಸ್ಥಾನ, ಭೋವಿ ಗುರುಪೀಠಕ್ಕೆ ಭಾನುವಾರ ಶಿವಮೊಗ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಶ್ರೀಮತಿ ಗೀತಾ ಶಿವರಾಜಕುಮಾರ ಅವರು ಭೇಟಿ ನೀಡಿ, ಗುರುಪೀಠದ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ಹಾಗೂ ವಿವಿಧ ಮಠಾಧೀಶರ ಆಶೀರ್ವಾದ ಪಡೆದರು. ನಟ ಶಿವರಾಜಕುಮಾರ ಜತೆ ಇದ್ದರು.

ಬಳಿಕ ನಿಟ್ಟೂರಿನ ನಾರಾಯಣ ಗುರು ಮಹಾಸಂಸ್ಥಾನ ಮಠದ ರೇಣುಕಾನಂದ ಸ್ವಾಮೀಜಿ,

ಹೊಸದುರ್ಗದ ಕುಂಚಿಟಿಗ ಮಹಾಸಂಸ್ಥಾನಮಠದಶಾಂತವೀರ ಸ್ವಾಮೀಜಿ, ವಾಲ್ಮೀಕಿ ಗುರುಪೀಠದ ವಾಲ್ಮೀಕಿ ಪ್ರಸನ್ನಾನಂದ ಸ್ವಾಮೀಜಿ, ಮಡಿವಾಳ ಗುರುಪೀಠದ ಬಸವ ಮಾಚಿದೇವ ಸ್ವಾಮೀಜಿ, ತಂಗಡಗಿ ಹಡಪದ ಅಪ್ಪಣ್ಣ ಗುರುಪೀಠದ ಅನ್ನದಾನಿ ಭಾರತಿ ಅಪ್ಪಣ್ಣ ಸ್ವಾಮೀಜಿ, ಕೇತೇಶ್ವರ ಸ್ವಾಮೀಜಿ, ಕುಂಬಾರ ಗುಂಡಯ್ಯ ಸ್ವಾಮೀಜಿ , ತಂಗನಹಳ್ಳಿ ಕಾಶಿ ಅನ್ನಪೂರ್ಣೇಶ್ವರಿ ಮಠದ ಮಹಾಲಿಂಗ ಸ್ವಾಮೀಜಿ, ಇರಕಲ್ ಮಠದ ಬಸವ ಪ್ರಸಾದ್ ಸ್ವಾಮೀಜಿಯವರ ಆಶೀರ್ವಾದ ಪಡೆದರು.

ಕಳೆದ ವರ್ಷ ವಿಧಾನ ಸಭೆ ಚುನವಣಾ ಪೂರ್ವಾ ಶ್ರೀಗಳಿಗೆ ನೀಡಿದ ಸಚಿವ ಮಧುಬಂಗಾರಪ್ಪ ಅವರ ವಾಗ್ದನದಂತೆ ಶಿವಮೊಗ್ಗದ ರವಿಕುಮಾರ ಅವರನ್ನು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರನ್ನಾಗಿ ಮಾಡಿದ್ದೇವೆ ಎಂದು ನೆನದರು.ಶಿವರಾಜ ಕುಮಾರ ಅವರು ಶ್ರೀಗಳೊಂದಿಗೆ ಉಪಹಾರ ಸೇವಿಸುತ್ತ ಮಾತನಾಡಿ ಶಕ್ತಿಧಾಮ ಸೇವೆ ಜನಸೇವೆಗೆ ಪ್ರೇರಣೆ ಹೆಚ್ಚಿಸಿದೆ. ಜನಸೇವೆ ಜನಾರ್ಧನ ಸೇವೆ. ನಮ್ಮ ಕಡೆ ಉಸಿರು ಇರುವ ತನಕ ಅಬಲೆಯರಿಗೆ ಸ್ವಾವಲಂಬಿಗಳಾಗಿ ಬದುಕು ಕಟ್ಟಿಕೊಳ್ಳಲು ಆಸರೆಯಾಗಿ ಪುನೀತ್ ಅವರ ಕನಸ್ಸನ್ನು ಈಡೇರಿಸುತ್ತೇವೆ ಎಂದು ನೆನೆದು ಭಾವುಕರಾದರು.

## ಸಾಲ ತೀರಿಸಲಾಗದೆ ರೈತ ಬಾಬುರೆಡ್ಡಿ ವಿಷ ಸೇವಿಸಿ ಆತ್ಮಹತ್ಯೆ



**ಚಳ್ಳಕೆರೆ:** ತಾಲ್ಲೂಕಿನ ಕರೀಕೆರೆ ಗ್ರಾಮದ ರೈತ ಬಾಬುರೆಡ್ಡಿ(44) ಕೃಷಿಗಾಗಿ ಮಾಡಿದ್ದ ಸಾಲ ತೀರಿಸಲಾಗದೆ ಮನೆಯಲ್ಲೇ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ವರದಿಯಾಗಿದೆ. ಈ ಬಗ್ಗೆ ಚಳ್ಳಕೆರೆ ಪೊಲೀಸ್ ಠಾಣೆಗೆ ದೂರು ನೀಡಿರುವ ಬಾಬುರೆಡ್ಡಿಯವರ ತಂದೆ ಹನುಮಂತರೆಡ್ಡಿ ಕಾಲುವೇಹಳ್ಳಿ ಗ್ರಾಮದ ರಿ.ಸರ್ವೆ ನಂ. 183/2ರಲ್ಲಿ 6 ಎಕರೆ ಜಮೀನಿನಲ್ಲಿ ನನ್ನ ಮಗ ಬಾಬುರೆಡ್ಡಿ ಶೇಂಗಾ, ಮೆಕ್ಕೆಜೋಳ, ತೊಗರಿಯನ್ನು ಬಿತ್ತನೆ ಮಾಡಿದ್ದ ಮಳೆಬಾರದ ಕಾರಣ ಜಮೀನಿನಲ್ಲಿ ಇದ್ದ ಬೆಳೆಗೆ ಟ್ಯಾಂಕರ್ ಮೂಲಕ ನೀರು ಹಾಯಿಸಿ ಬೆಳೆಯನ್ನು ಉಳಿಸಿಕೊಳ್ಳಲು ಸ್ನೇಹಿತರು, ಸಂಬಂಧಿಕರ ಬಳಿ ಕೈಗಡ ಸುಮಾರು 5 ಲಕ್ಷ ಸಾಲ ಮಾಡಿ ಫಸಲಿಗೆ ನೀರು ಹಾಯಿಸಿದ್ದ ಫಸಲು ಬಾರದ ಕಾರಣ ಸಾಲ ತೀರಿಸಲು ಚಿಂತೆಗೀಡಾಗಿದ್ದ ಬಾಬುರೆಡ್ಡಿ ಶನಿವಾರ ರಾತ್ರಿ 7.30ರ ಸುಮಾರಿನಲ್ಲಿ ಮನೆಯಲ್ಲೇ ವಿಷ ಸೇವಿದನ್ನು ಪತ್ನಿ ಶ್ವೇತ ಗಮನಿಸಿ ಕೂಡಲೇ ಚಳ್ಳಕೆರೆಯ ಸಾರ್ವಜನಿಕ ಆಸ್ಪತ್ರೆಗೆ ಕರೆತರಲಾಯಿತು. ಅಲ್ಲಿಂದ ಚಿತ್ರದುರ್ಗ ಆಸ್ಪತ್ರೆಯಲ್ಲಿ ಹೆಚ್ಚಿನ ಚಿಕಿತ್ಸೆಕೊಡಿಸಿ, ಭಾನುವಾರ ಸಂಜೆ ದಾವಣಗೆರೆ ಆಸ್ಪತ್ರೆಗೆ ಕರೆದ್ಯೊಯುವ ಮಾರ್ಗಮದ್ಯದಲ್ಲಿ ಬಾಬುರೆಡ್ಡಿ ಸಾವನಪ್ಪಿರುತ್ತಾರೆ. ಅತ್ತ ಮಳೆಯು ಇಲ್ಲದೆ, ಬೆಳೆಯೂ ಕೈಸೇರದ ಕಾರಣ ನನ್ನ ಮಗ ಕೃಷಿಗಾಗಿ ಮಾಡಿದ್ದ 5 ಲಕ್ಷ ಸಾಲವನ್ನು ಹೇಗೆ ತೀರಿಸಬೇಕು ಎಂಬ ಚಿಂತೆಯಲ್ಲಿ ಮಾನಸಿಕವಾಗಿ ನೊಂದು ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ದೂರಿನಲ್ಲಿ ತಿಳಿಸಲಾಗಿದೆ. ಚಳ್ಳಕೆರೆ ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

ಕೃಷಿಯನ್ನೇ ನೆಚ್ಚಿಗೊಂಡು ಜೀವನ ಸಾಗಿಸುತ್ತಿರುವ ಎಷ್ಟೋ ರೈತರು ಸಾಲ ಸೋಲ ಮಾಡಿ ಕೃಷಿಯಲ್ಲಿ ತೊಡಗುತ್ತಾರೆ. ಮಳೆಯನ್ನೇ ನೆಚ್ಚಿಕೊಂಡು ಕೈಗಡ, ಬ್ಯಾಂಕ್‌ಗಳಲ್ಲಿ ಸಾಲಮಾಡಿ ಬಿತ್ತನೆ ಮಾಡುತ್ತಾರೆ. ಆದರೆ, ಮಳೆಬಾರದೆ ಅತ್ತ ಇದ್ದ ಕೊಳವೆಬಾವಿಯಲ್ಲೂ ನೀರು ಬತ್ತಿ ಆತ್ಮಹತ್ಯೆಗೆ ಇಳಿಯುತ್ತಿದ್ದಾರೆ. ರೈತನ ಸಾವಿನ ಬಗ್ಗೆ ಯಾವುದೇ ಬೆಲೆ ನೀಡದ ಸರ್ಕಾರಗಳು ಇದ್ದರೂ ಯಾವುದೇ ಪ್ರಯೋಜನವಿಲ್ಲ. ರೈತರಿಗೆ ಬೇಕಿರುವ ಅಗತ್ಯ ಸೌಲಭ್ಯಗಳನ್ನು ಒದಗಿಸಿದರೆ ಯಾವುದೇ ರೈತ ಆತ್ಮಹತ್ಯೆ ಮಾಡಿಕೊಳ್ಳುವ ಗೋಜಿಗೆ ಹೋಗಲಾರ. ಬೆಳೆನಷ್ಟ, ಬೆಳೆಪರಿಹಾರಗಳನ್ನು ಕಾಲಕಾಲಕ್ಕೆ ಸರಿಯಾಗಿ ರೈತರಿಗೆ ನೀಡಿದರೆ ಸಾಕು ಎಷ್ಟೋ ರೈತರು ಬದುಕು ಕಟ್ಟಿಕೊಳ್ಳುತ್ತಾರೆ. ಸಾಲ ಮಾಡಿ ಬಿತ್ತನೆ ಮಾಡಿ ಕೊಳವೆಬಾವಿನಲ್ಲಿ ನೀರಿಲ್ಲದೆ ಆತ್ಮಹತ್ಯೆ ಮಾಡಿಕೊಳ್ಳುವುದೇ ದಾರಿಯಾಗಬಾರದು. ರೈತರು ಸಹ ಧೈರ್ಯದಿಂದ ಎದುರಿಸಬೇಕು ಎಂದು ರೈತ ಸಂಘ ರಾಜ್ಯ ಉಪಾಧ್ಯಕ್ಷ ಕೆ.ಪಿ.ಭೂತಯ್ಯ ಮನವಿ ಮಾಡಿದ್ದಾರೆ.

## ಏಪ್ರಿಲ್ 30 ರಂದು ಮತಗಟ್ಟೆ ಅಧಿಕಾರಿ, ಸಿಬ್ಬಂದಿಗಳಿಗೆ ತರಬೇತಿ

» **ದಾವಣಗೆರೆ**

ಲೋಕಸಭಾ ಚುನಾವಣೆ ನಡೆಯುತ್ತಿದ್ದು ಮೇ 7 ರಂದು ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ಮತದಾನ ನಡೆಯಲಿದೆ. ಮತದಾನ ದಿನದಂದು ಕರ್ತವ್ಯಕ್ಕೆ ನೇಮಕವಾದ ಅಧಿಕಾರಿ, ಸಿಬ್ಬಂದಿಗಳಿಗೆ ತರಬೇತಿಯನ್ನು ಏಪ್ರಿಲ್ 30 ರಂದು ಬೆಳಗ್ಗೆ 9 ರಿಂದ ಸಂಜೆ 5 ಗಂಟೆಯವರೆಗೆ ಆಯಾ ತಾಲ್ಲೂಕು ಕೇಂದ್ರಗಳಲ್ಲಿ ಏರ್ಪಡಿಸಲಾಗಿದೆ ಮತ್ತು ಮತದಾನ ದಿನ ಕರ್ತವ್ಯಕ್ಕೆ ನಿಯೋಜಿತರಾವರಿಗೆ ಮತದಾನಕ್ಕೆ ಸೌಲಭ್ಯ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ: ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ.

ಜಗಳೂರು ಸರ್ಕಾರಿ ಪದವಿ ಪೂರ್ವ ಕಾಲೇಜು, ಹರಿಹರ ಸೆಂಟ್ ಮೇರಿಸ್ ಕಾನ್ವೆಂಟ್ ಸ್ಕೂಲ್, ಹರಪನಹಳ್ಳಿ ರಸ್ತೆ, ಹರಿಹರ, ದಾವಣಗೆರೆ ಉತ್ತರ ಮತ್ತು ದಕ್ಷಿಣ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಸಿದ್ದಗಂಗಾ ವಿದ್ಯಾಸಂಸ್ಥೆ, ಸಿದ್ದರಾಮೇಶ್ವರ ಬಡಾವಣೆ, ಮಾಯಕೊಂಡ ತರಳಬಾಳು ವಿದ್ಯಾಸಂಸ್ಥೆ, ಅನುಭವ ಮಂಟಪ, ಹದಡಿ ರಸ್ತೆ, ಚನ್ನಗಿರಿ ಶ್ರೀಶ್ರೀಶ್ರೀ ಶಿವಲಿಂಗೇಶ್ವರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಹೊನ್ನಾಳಿಯಲ್ಲಿ ಶ್ರೀಮತಿ ಗಂಗಮ್ಮ ಶ್ರೀ ವೀರಭದ್ರಶಾಸ್ತ್ರಿ ಕೈಗಾರಿಕಾ ತರಬೇತಿ ಕೇಂದ್ರ, ಹಿರೇಕಲ್ಮಠ ಇಲ್ಲಿ ತರಬೇತಿ ಏರ್ಪಡಿಸಲಾಗಿದೆ. ಅಂಚೆ ಮತದಾನ ಮಾಡುವವರಿಗೆ ತರಬೇತಿ ಕೇಂದ್ರದಲ್ಲಿಯೇ ಸೌಲಭ್ಯ ಕೇಂದ್ರ ಸ್ಥಾಪಿಸಲಾಗಿದೆ.

**ಹರಪನಹಳ್ಳಿ ತರಬೇತಿ ಮೇ.1;** ಹರಪನಹಳ್ಳಿ ವಿಧಾನಸಭಾ ಕ್ಷೇತ್ರದ ಚುನಾವಣಾ ಕರ್ತವ್ಯ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಮೇ 1 ರಂದು ತರಬೇತಿಯನ್ನು ಏರ್ಪಡಿಸಲಾಗಿದೆ. ತರಬೇತಿ ಬೆಳಗ್ಗೆ 9 ರಿಂದ ಸಂಜೆ 5 ಗಂಟೆಯವರೆಗೆ ಹರಪನಹಳ್ಳಿ ಶ್ರೀ ತರಳಬಾಳು ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆ ಇಲ್ಲಿ ನಡೆಯಲಿದ್ದು ಅಂಚೆ ಮತದಾನ ಮಾಡುವವರಿಗೆ ಇಲ್ಲಿಯೇ ಸೌಲಭ್ಯ ಕೇಂದ್ರ ಸ್ಥಾಪಿಸಲಾಗಿದೆ. ಮೇ 1 ರಿಂದ 3 ರವರೆಗೆ ಸ್ಮಾರ್ಟ್ ಸಿಟಿಯಲ್ಲಿ ಅಂಚೆ ಮತದಾನ; ಚುನಾವಣಾ ಆಯೋಗವು ಗುರುತಿಸಿದ ಅಗತ್ಯ ಸೇವೆಗಳ 16 ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಮತದಾನ ದಿನ ಮತದಾನ ಮಾಡಲು ಸಾಧ್ಯವಾಗುವುದಿಲ್ಲ ಎಂದು ನಮೂನೆ 12ಡಿ ರಡಿ ಘೋಷಣಾ ಪತ್ರ ನೀಡಿದವರು ಮತದಾನ ಮಾಡಲು ಮೇ 1, 2 ಮತ್ತು 3 ರಂದು ಜಿಲ್ಲಾಡಳಿತ ಭವನದ ಪಕ್ಕದಲ್ಲಿನ ಸ್ಮಾರ್ಟ್ ಸಿಟಿ ಕಟ್ಟಡದ ಕೊಠಡಿ ಸಂಖ್ಯೆ 5 ರಲ್ಲಿ ಮತ ಕೇಂದ್ರ ಸ್ಥಾಪಿಸಲಾಗಿದೆ. ಮತದಾನ ಮಾಡಲು 19 ದಾಖಲೆಗಳಲ್ಲಿ ಒಂದನ್ನು ಹಾಜರುಪಡಿಸಿ ಅಂಚೆ ಮತದಾನ ಮಾಡಬಹುದಾಗಿದೆ.

**ಚುನಾವಣಾ ಕರ್ತವ್ಯ ನಿರತ ಮತದಾರರು;** ಚುನಾವಣಾ ಕರ್ತವ್ಯ ನಿರತ ಮತದಾರರು ತರಬೇತಿ ಕೇಂದ್ರದಲ್ಲಿ ಅಂಚೆ ಮತದಾನ ಮಾಡಲು ಸಾಧ್ಯವಾಗದಿದ್ದಲ್ಲಿ ಅಂಚೆ ಮತದಾನ ಮಾಡಲು ಸ್ಮಾರ್ಟ್ ಸಿಟಿ ಕಟ್ಟಡದಲ್ಲಿ ಮೇ 1 ರಿಂದ 3 ರ ವರೆಗೆ ಅವಕಾಶ ಕಲ್ಪಿಸಲಾಗಿದೆ.

## ಪ್ರಮುಖ ಸುದ್ದಿ

### ಬಿಸಿಲ ಝಳದಿಂದ ತಪ್ಪಿಸಿಕೊಳ್ಳಲು ತಂಪುಪಾನಿ, ಬಾವಿ,ಕೃಷಿ ಹೊಂಡಗಳತ್ತ ಮುಖ ಮಾಡಿದ ಜನರು

# ತಾಲ್ಲೂಕಿನಾದ್ಯಂತ ದಿನೇದಿನೆ ಏರುತ್ತಿರುವ ಬಿಸಿಲ ತಾಪ

» **ಚಳ್ಳಕೆರೆ**

ತಾಲ್ಲೂಕಿನಾದ್ಯಂತ ದಿನೇ ದಿನೆ ಏರುತ್ತಿರುವ ಬಿಸಿಲಬೇಗೆ ಭೀಕರತೆ ಸೃಷ್ಠಿಸುತ್ತಿದೆ. ಮಾರ್ಚ್ ಕೊನೆಯ ವಾರಕಳೆಯುತ್ತಿದ್ದರೂ ಮಳೆಬಾರದೆ ಜನ, ಜಾನುವಾರುಗಳು ಕುಡಿಯುವ ನೀರು, ಮೇವಿಗಾಗಿ ಅವಣಿಸುತ್ತಿವೆ.

ತಾಲ್ಲೂಕಿನಲ್ಲಿ ಬರೋಬರಿ 40, 41 ಡಿಗ್ರಿಯಷ್ಟು ಬಿಸಿಲ ತಾಪಮಾನ ಏರುತ್ತಲೇ ಇದೆ. ಪರಿಣಾಮಜನರು ಬಿಸಿಲಿನಿಂದ ಹೈರಾಣಾದ ದೇಹಕ್ಕೆ ತಂಪು ನೀಡಲು ಹಲವು ಮಾರ್ಗಗಳ ಮೊರೆ ಹೋಗುತ್ತಿದ್ದಾರೆ. ಕೆಲವರು ತಂಪುಪಾನಿಯಗಳತ್ತ ಮುಖ ಮಾಡಿದರೆ, ಕೆಲವರು ಕೃಷಿ ಹೊಂಡ, ಬಾವಿಗಳಲ್ಲಿ ಇರುವ ನೀರಿನಲ್ಲಿ ಈಜಾಡಿ ತಮ್ಮ ಬಿಸಿಗದಂಧೆಯನ್ನು ನೀಗಿಸಿಕೊಳ್ಳುತ್ತಿದ್ದಾರೆ. ಇದಕ್ಕೆ ಬಡವಾಳ ಮಾಡಿಕೊಂಡಿರುವ ಕೆಲವರು ಕೃಷಿ ಹೊಂಡಗಳಲ್ಲಿ ಇಂತಿಷ್ಟು ಹಣ ನೀಡಿ ಜನರು ತಮ್ಮ ಬೇಸಿಗೆ ದಣಿವು ನೀಗಿಸಿಕೊಳ್ಳುತ್ತಿದ್ದಾರೆ.

ಏರುತ್ತಿರುವ ತಾಪಮಾನದಿಂದ ಮಧ್ಯಾಹ್ನ ವೇಳೆಗೆ ನಗರ ಸಂಪೂರ್ಣ ಸ್ತಂಭವಾಗುತ್ತಿದೆ. ಗ್ರಾಮೀಣ ಭಾಗಗಳಿಂದ ಬರುವ ಜನರೂ ಸಹ ನಗರಕ್ಕೆ ಬಾರದೆ ನಗರ ಸಂಪೂರ್ಣ ಬಣಗುಡುತ್ತಿದೆ. ಹೊರಗಡೆ ಸುಡುವ ಬಿಸಿಲು, ಮನೆಯೊಳಗೆ ಉಸಿರುಗಟ್ಟಿಸುವ ಧಗೆಯಿಂದ ಜನರು ನರಳುವಂತಾಗಿದೆ. ಹೊರಗೆ ಹೋಗಲಾಗದೇ, ಮನೆಯೊಳಗೂ ಕೂರಲಾಗದೇ ಜನರು ಪರದಾಡುತ್ತಿದ್ದಾರೆ. ವಿಶೇಷವೆಂದರೆ ವಾತಾವರಣದಲ್ಲೂ ಹಸಿರು ಮಾಯವಾಗಿ ಎಲ್ಲೆಲ್ಲೂ ಒಣಗಿದ ಗಿಡ ಮರಗಳೇ ಕಾಣಿಸುತ್ತಿವೆ. ಜನರು ತೋಟಗಳತ್ತ ಮುಖಮಾಡಿ ನೀರಿನ ಈಜಾಡಿ ಮರ,ಗಿಡಗಳ ಕೆಳಗೆ ತಮ್ಮ ದಾಣಿವಾರಿಸಿಕೊಳ್ಳುತ್ತಿದ್ದಾರೆ.

ಸಾಮಾನ್ಯವಾಗಿ ಮಾರ್ಚ್‌ನಿಂದ ಪ್ರಾರಂಭವಾಗಬೇಕಿದ್ದ ಬಿಸಿಲಿನ ಝಳ ಫೆಬ್ರವರಿಯಿಂದಲೇ ಹೆಚ್ಚಾಗಿತ್ತು. ಜನರು ಮುಂದೆ ಬೇಗನೇ ಮಳೆ ಬರಬಹುದು ಎಂಬ ನಿರೀಕ್ಷೆಯಲ್ಲಿದ್ದರೂ ಸಹ ಮಳೆಬಾರದೆ ಪ್ರತಿದಿನ ಏರುತ್ತಿರುವ ಬಿಸಿಲಿಗೆ ನಲುಗಿದ್ದಾರೆ. ಜನರು ತಂಪು ಪಾನೀಯ, ಎಳೆನೀರು, ಮಜ್ಜಿಗೆ, ಕಲ್ಲಂಗಡಿ, ಮೊರೆಹೋಗಿ ಬಿಸಿಲಿನ ತಾಪವನ್ನು ಸಹಿಸಿಕೊಳ್ಳುತ್ತಿರುವುದು ಎಲ್ಲಡೆ ಕಂಡುಬರುತ್ತಿದೆ. ಇದ್ದಕ್ಕಿದ್ದಂತೆ ಬಿಸಿಲು ಹೆಚ್ಚಾಗಿರುವುದು ಪಕೃತಿಯ ಅಸಮತೋಲನವನ್ನು ಸೂಚಿಸುತ್ತಿದೆ. ಗ್ರಾಮೀಣ ಭಾಗದ ಜನರು ಬಾವಿ, ತೋಟದ ಮನೆಯಲ್ಲಿನ ಕೃಷಿ ಹೊಂಡಗಳಿಗೆ ಹೋಗಿ ದಿನವೀಡಿ ಈಜಾಡಿ ತಮ್ಮ ದಣಿವಾರಿಸಿಕೊಳ್ಳುತ್ತಿದ್ದಾರೆ. ತಾಲ್ಲೂಕಿನ ಕಾಲುವೇಹಳ್ಳಿ ಗ್ರಾಮದ ಬಿ.ಪಿ.ಗಾಡಿರಯ್ಯ ಎಂಬುವವ ಜಮೀನಿನಲ್ಲಿರುವ ಪುರಾತನ ಬಾವಿಗೆ ಗ್ರಾಮದ ಯುವಕರು ಮುಗಿಬಿದ್ದು ಈಜಾಡುತ್ತಾರೆ. ಪುರಾತನ ಬಾವಿಯಲ್ಲಿ ಎಂತಹ ಬಿರುಬಿಸಿಲಿನಲ್ಲೂ ಬತ್ತದೆ ನೀರನ್ನು ಇಟ್ಟುಕೊಂಡಿರುತ್ತದೆ. ಅದಲ್ಲದೆ ತಾಲ್ಲೂಕಿನ ಮನ್ನಮ್ಮೆನಹಟ್ಟಿ, ನಾಯಕನಹಟ್ಟಿ, ನನ್ನಿವಾಳ, ಗೊರ್ಲಕಟ್ಟೆ, ಬುಡ್ನಹಟ್ಟಿ, ಗೋಪನಹಳ್ಳಿ ಭಾಗಗಳಲ್ಲಿ ಕೃಷಿ ಹೊಂಡಕ್ಕೆ ಮುಗಿಬಿದ್ದರೆ, ಕಾಪರಹಳ್ಳಿ, ಜಡೇಕುಂಟೆ, ಕಲಮರಹಳ್ಳಿ, ಕಸವಿಗೊಂಡನಹಳ್ಳಿ, ಮೈಲನಹಳ್ಳಿ ಗ್ರಾಮದ ಜನರು ವಾಣಿವಿಲಾಸ ಸಾಗರದಿಂದ ವೇದಾವತಿ ನದಿಗೆ ನೀರು ಹರಿಸಿದ ಪರಿಣಾಮ ನದಿಯಲ್ಲಿ ಮಕ್ಕಳು, ಮಹಿಳೆಯರು ಈಜಾಡಿ ತಮ್ಮ ಬೇಸಿಗೆ ದಣಿವು ಹಾರಿಸಿಕೊಳ್ಳುತ್ತಿದ್ದಾರೆ.



ದಿನದಿಂದ ದಿನಕ್ಕೆ ಬೇಸಿಗೆ ಏರುತ್ತಿದೆ ಮದ್ಯಾಹ್ನದ ವೇಳೆ ಬಿಸಿಲಿನ ತಾಪತಾಳಲಾರದೆ ನಮ್ಮ ಗ್ರಾಮದಲ್ಲಿರುವ ಬಾವಿಯಲ್ಲಿ ಯುವಕರು ದಿನವೀಡಿ ಈಜಾಡುತ್ತಾರೆ. ನಾವು ಸಹ ಭಾನುವಾರ ರಜೆ ಸಂದರ್ಭದಲ್ಲಿ ಮಕ್ಕಳೊಂದಿಗೆ ಬಂದು ಬಾವಿಯಲ್ಲಿ ಈಜಾಡುತ್ತೇವೆ. ಬಿಸಿಲಿನತಾಪ ನೆಮ್ಮದಿಯನ್ನು ಕಸಿದುಕೊಂಡಿದೆ.

» **ರಾಘವೇಂದ್ರ ಆರೋಗ್ಯ ಇಲಾಖೆ ಉದ್ಯೋಗಿ ಕಾಲುವೇಹಳ್ಳಿ.**



# ಆಗಬೇಕಾದ ಕೆಲಸಗಳು

## ನಾವು ಸದಾ ಚರ್ಚಿಸುತ್ತಿರುವ ವಿಷಯಗಳು.......

ದೇಶ ಅಥವಾ ರಾಜ್ಯದಲ್ಲಿ ಇಂದಿನ ದಿನಗಳಲ್ಲಿ ಅತ್ಯಂತ ಅನಿವಾರ್ಯವಾಗಿ, ತೀವ್ರವಾಗಿ, ಅತ್ಯಗತ್ಯವಾಗಿ ಚರ್ಚೆಯಾಗಬೇಕಾದ ವಿಷಯಗಳು.......

1 ತೀವ್ರವಾಗಿ ಕುಸಿಯುತ್ತಿರುವ ಜನರ ಆರೋಗ್ಯ.......

2 ಅತ್ಯಂತ ವೇಗವಾಗಿ ನಾಶವಾಗುತ್ತಿರುವ ಪರಿಸರ ರಕ್ಷಣೆ....

3 ವ್ಯಾಪಕವಾಗಿ ಹರಡಿರುವ ಭ್ರಷ್ಟಾಚಾರದ ಕಾರಣ ಅಭಿವೃದ್ಧಿಯ ಅಸಮರ್ಪಕ ನಿರ್ವಹಣೆ....

4 ಚುನಾವಣಾ ರಾಜಕೀಯದ ಕಾರಣ ಭಾರತೀಯ ಸಾಮಾಜಿಕ ವ್ಯವಸ್ಥೆ ದ್ವೇಷ ಅಸೂಯೆಗಳ ಗೂಡಾಗಿ ಮನಸ್ಸುಗಳು ಒಡೆಯುತ್ತಿವೆ. ಅದನ್ನು ಒಂದುಗೂಡಿಸುವ ಪ್ರಯತ್ನ ಆಗಬೇಕಿದೆ....

5 ಜಾತಿ ಪದ್ದತಿಯ ನಿರ್ಮೂಲನೆಗೆ ಸಣ್ಣ ಪ್ರಮಾಣದ ಪ್ರಯತ್ನಗಳಾದರು ಸರ್ಕಾರದ ಮಟ್ಟದಲ್ಲಿ ಆಗಬೇಕಿದೆ.....

6 ಭಾರತೀಯ ಸಮಾಜದಲ್ಲಿ ವ್ಯಾಪಕವಾಗುತ್ತಿರುವ ಹಿಂಸಾತ್ಮಕ ಚಟುವಟಿಕೆಗಳನ್ನು ಆದಷ್ಟು ಕಡಿಮೆ ಮಾಡಬೇಕಿದೆ....

7 ಅರ್ಹತೆಗೆ ತಕ್ಕಂತ ಉದ್ಯೋಗ ಸೃಷ್ಟಿಸುವುದನ್ನು ನಿಲ್ಲಿಸಿ ಹೊಟ್ಟೆಪಾಡಿನ ಉದ್ಯೋಗಗಳೇ ಹೆಚ್ಚಾಗುತ್ತಿರುವುದು ನಿರುದ್ಯೋಗ ಹೆಚ್ಚಾಗಲು ಕಾರಣವಾಗಿ ಭವಿಷ್ಯದಲ್ಲಿ ಆಗುವ ದುಷ್ಪರಿಣಾಮಗಳನ್ನು ತಡೆಯಲು ಈಗಿನಿಂದಲೇ ಪ್ರಯತ್ನಿಸಬೇಕಿದೆ....



8 ರೈತರ ಆತ್ಮಹತ್ಯೆ ಮತ್ತು ಕೃಷಿ ದಿನೇ ದಿನೇ ಶೋಚನೀಯ ಸ್ಥಿತಿ ತಲುಪುತ್ತಿದೆ. ಅದಕ್ಕೆ ಪರಿಹಾರವನ್ನು ಯುದ್ಧೋಪಾದಿಯಲ್ಲಿ ಪರಿಹರಿಸಬೇಕಾಗಿದೆ....

9 ಆಹಾರದ ಕಲಬೆರಕೆ ಭಾರತೀಯರ ಆಯಸ್ಸನ್ನೇ ಕಡಿಮೆ ಮಾಡುತ್ತಿದೆ. ಅದಕ್ಕೆ ತತ್ ತಕ್ಷಣ ಕ್ರಮಗಳನ್ನು ಕೈಗೊಳ್ಳಬೇಕಿದೆ....

10 ಮಾದಕ ವಸ್ತುಗಳ ನಿಯಂತ್ರಣ ಮತ್ತು ಆನ್ ಲೈನ್ ಜೂಜು ಕೇಂದ್ರಗಳ ನಿಷೇಧ ಹೇರದಿದ್ದರೆ ಯುವ ಸಮೂಹ ಸಂಪೂರ್ಣ ನಾಶವಾಗುತ್ತದೆ.

ಅದಕ್ಕಾಗಿ ಮಾರ್ಗೋಪಾಯಗಳನ್ನು ಕಂಡುಹಿಡಿಯಬೇಕಿದೆ.....

ಆದರೆ ಮಾಧ್ಯಮಗಳು, ಸಾಮಾಜಿಕ ಜಾಲತಾಣಗಳು, ರಾಜಕಾರಣಿಗಳು, ಅಧಿಕಾರಿಗಳು, ಧಾರ್ಮಿಕ ಮುಖಂಡರು, ಹೋರಾಟಗಾರರು ಚರ್ಚೆ ಮಾಡುತ್ತಿರುವ ವಿಷಯಗಳು ಬೇರೆಯೇ ಇದೆ......

1 ಲೋಕಸಭಾ ಚುನಾವಣೆಯನ್ನು ಯಾವ ಯಾವ ತಂತ್ರಗಳನ್ನು ಉಪಯೋಗಿಸಿ ಗೆಲ್ಲಬೇಕು ಎಂಬುದೇ ಬಹುಮುಖ್ಯ ಚರ್ಚೆಯ ವಿಷಯವಾಗಿದೆ.....

2 ಅಯೋಧ್ಯೆ ರಾಮ ಮಂದಿರ ಉದ್ಘಾಟನಾ ಸಮಾರಂಭದ ರಾಜಕೀಯ ಲಾಭಗಳನ್ನು ಹೇಗೆ ಪಡೆಯಬೇಕು........

3 ಗ್ಯಾರಂಟಿ ಯೋಜನೆಗಳ ಮೂಲಕ ಮತದಾರರನ್ನು ಯಾವ ರೀತಿ ಆಕರ್ಷಿಸಬೇಕು......

4 ಜಾತಿ ಜನಗಣತಿಯ ವಿಷಯವನ್ನು ಹೇಗೆ ಚುನಾವಣಾ ತಂತ್ರವಾಗಿ ಲಾಭ ಮಾಡಿಕೊಳ್ಳಬೇಕು......

5 ಹಿಂದೂ ಮುಸ್ಲಿಂ ಮತದಾರರನ್ನು ಯಾವ ರೀತಿಯಲ್ಲಿ ವಿಭಜಿಸಿ ಅದನ್ನೇ ಪ್ರಮುಖ ಅಸ್ತ್ರವಾಗಿ ಅಧಿಕಾರ ಹಿಡಿಯಬಹುದು....

6 ಎಡಪಂಥೀಯ ಮತ್ತು ಬಲಪಂಥೀಯ ವಿಚಾರಗಳ ಮೇಲೆಯೇ ನಮ್ಮ ಅಭಿಪ್ರಾಯ ರೂಪಿಸಿಕೊಂಡು ಅನವಶ್ಯಕವಾಗಿ ಚರ್ಚಿಸುತ್ತಾ ಕಾಲ ಕಳೆಯುವುದು......

7 ಆರ್ಯ – ದ್ರಾವಿಡ ಸಂಸ್ಕೃತಿಗಳ ಆಧಾರದ ಮೇಲೆ ವಿಭಜನಾತ್ಮಕ ಮನಸ್ಥಿತಿಯನ್ನು ಜನರಲ್ಲಿ ಬಿತ್ತುವುದು.....

8 ನೀರು – ಭಾಷೆಯ ವಿವಾದಗಳನ್ನು ಸದಾ ಚರ್ಚಿಸುತ್ತ ಅದನ್ನು ವಿವಾದವಾಗಿ ಸದಾ ಜೀವಂತ ಇಡುವುದು.....

9 ಟೋಲ್ ಪೆಟ್ರೋಲ್ ಗ್ಯಾಸ್ ಜಿಎಸ್ಟಿ ಆಹಾರ ಪದಾರ್ಥಗಳು ಮುಂತಾದ ಬೆಲೆಗಳನ್ನು ಏರಿಸುತ್ತಾ ಒಮ್ಮೊಮ್ಮೆ ಅಲ್ಪ ಪ್ರಮಾಣದಲ್ಲಿ ಇಳಿಸುತ್ತಾ ಜನರಲ್ಲಿ ಅದರ ಬಗ್ಗೆಯೇ ಯೋಚಿಸುವಂತೆ ಮಾಡುವುದು.....

10 ನಿರುದ್ಯೋಗ ನಿವಾರಣೆಯ ಭರವಸೆ, ವಿದೇಶದಿಂದ ಕಪ್ಪು ಹಣದ ತರುವ ಆಶ್ವಾಸನೆ ಹೀಗೆ ಮತ್ತೆ ಮತ್ತೆ ಅದೇ ವಿಷಯಗಳ ಪ್ರಸ್ತಾಪ......

ಹೀಗೆ ಜನರ ಮೂಲಭೂತ ಅವಶ್ಯಕತೆಗಳೇ ಬೇರೆ. ಜನಸಾಮಾನ್ಯರು ಸೇರಿ ಎಲ್ಲರೂ ಚರ್ಚಿಸುವ ವಿಷಯಗಳೇ ಬೇರೆ......

ಒಟ್ಟಿನಲ್ಲಿ ಇಡೀ ದೇಶ ರಾಜಕಾರಣಿಗಳ ಅಧಿಕಾರ ದಾಹದ ಸುತ್ತಲೇ ಸುತ್ತುತ್ತ ಪ್ರಜಾಪ್ರಭುತ್ವ ಪರೋಕ್ಷವಾಗಿ ರಾಜಪ್ರಭುತ್ವದ ರೀತಿಯಲ್ಲಿಯೇ ಕಾರ್ಯನಿರ್ವಹಿಸುತ್ತಿರುವಂತಿದೆ. ಜಾಗೃತರಾಗಬೇಕಾದವರು ಕಾರ್ಪೊರೇಟ್ ಸಂಸ್ಥೆಗಳು ತಂತ್ರಗಾರಿಕೆಗೆ ಬಲಿಯಾಗಿ ಅವರ ಗುಲಾಮರಾಗಿಯೇ ತಮಗರಿವಿಲ್ಲದೆ ಬಂಧಿಯಾಗಿದ್ದಾರೆ.....


ಏಳು ಸುತ್ತಿನ ಕೋಟೆಯ ಒಳಗೆ ನುಗ್ಗುವ ಕೆಲಸವನ್ನು ಪ್ರಜ್ಞಾವಂತರು ಮಾಡಬೇಕಿದೆ. ಅದು ಕಷ್ಟದ ಕೆಲಸವಾದರು ಅಸಾಧ್ಯವಲ್ಲ. ಆ ನಿಟ್ಟಿನಲ್ಲಿ ಪ್ರಯತ್ನಗಳು ಸಾಗಲಿ ಎಂದು ಆಶಿಸುತ್ತಾ.......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,

ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ ಪರಿವರ್ತನೆಗಾಗಿ,

ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

## ರಾಜ್ಯ ಉಪಾಧ್ಯಕ್ಷರಾಗಿ ಡಾ: ಎಂ.ಹೆಚ್.ಕೃಷ್ಣಮೂರ್ತಿ

» **ಹೊಸದುರ್ಗ**

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಡಿ.ಕೆ.ಶಿವಕುಮಾರ್ ಅವರ ಅನುಮೋದನೆ ಮೇರಗೆ ಡಾ:ಎಂ.ಹೆಚ್.ಕೃಷ್ಣಮೂರ್ತಿ, ಹೊಸದುರ್ಗ ಇವರನ್ನ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಹಿಂದುಳಿದ ವರ್ಗಗಳ ವಿಭಾಗದ ರಾಜ್ಯ ಉಪಾಧ್ಯಕ್ಷರನ್ನಾಗಿ ನೇಮಿಸಲಾಗಿದೆ ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಹಿಂದುಳಿದ ವರ್ಗಗಳ ವಿಭಾಗದ ರಾಜ್ಯ ಅಧ್ಯಕ್ಷರಾದ ಎಸ್.ಮಧುಬಂಗಾರಪ್ಪ ತಮ್ಮ ಆದೇಶ ಪತ್ರದಲ್ಲಿ ತಿಳಿಸಿದ್ದಾರೆ.

ಅವರು ನೀಡಿರುವ ಆದೇಶ ಪತ್ರದಲ್ಲಿ ತಾವು ಪಕ್ಷದ ಹಾಗೂ ರಾಜ್ಯ–ಜಿಲ್ಲಾ ಕಾಂಗ್ರೆಸ್ ಸಮಿತಿಯ ಮಾರ್ಗದರ್ಶನದಲ್ಲಿ ಮತ್ತು ಸ್ಥಳಿಯ ನಾಯಕರ ಸಹಯೋಗದಲ್ಲಿ ಹಿಂದುಳಿದ ವರ್ಗಗಳ ವಿಭಾಗದ ಪಕ್ಷದ ಸಂಘಟನೆ ಮತ್ತು ಬಲವರ್ಧನೆಗೆ ತಾವು ಕಾರ್ಯೋನ್ಮುಖರಾಗಬೇಕೆಂದು ಆದೇಶ ಪತ್ರದಲ್ಲಿ ಸೂಚಿಸಿದ್ದಾರೆ.

### ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರಿಂದ ಮತದಾನ ಜಾಗೃತಿಗೆ ಕ್ಯಾಂಡಲ್ ಲೈಟಿಂಗ್, ಮಾನವ ಸರಪಳಿ

## ಚುನಾವಣೆಯ ದಿನ ಬಂದಿದೆ, ಬಟನ್ ಅನ್ನು ಬುದ್ಧಿವಂತಿಕೆಯಿಂದ ಒತ್ತಿರಿ

» **ದಾವಣಗೆರೆ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಏಪ್ರಿಲ್ 29 ರಂದು ನಗರದ ಬೀರಲಿಂಗೇಶ್ವರ ದೇವಸ್ಥಾನದ ಬಳಿಯಿಂದ ಮತದಾನ ಜಾಗೃತಿಗೆ ಜಾಥಾಗೆ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲನಾಯಕ್ ಚಾಲನೆ ನೀಡಿದರು.

ಜಾಥಾದಲ್ಲಿ ಸುಮಾರು 250 ರಿಂದ 300 ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರು ಭಾಗವಹಿಸಿ ಘೋಷವಾಕ್ಯಗಳೊಂದಿಗೆ ನಿಮ್ಮ ಮತದ ಮೂಲಕ ನಿಮ್ಮ ಧ್ವನಿಯನ್ನು ಕೇಳಬಹುದು, ಒಂದು ಬಟನ್ ಒತ್ತುವ ಮೂಲಕ ಇಡೀ ರಾಷ್ಟ್ರವನ್ನು ಬದಲಾಯಿಸಬಹುದು,



ಯಾವುದೇ ಭಯ ಬೇಡ, ಚುನಾವಣೆಯ ದಿನ ಬಂದಿದೆ, ಬಟನ್ ಅನ್ನು ಬುದ್ಧಿವಂತಿಕೆಯಿಂದ ಒತ್ತಿರಿ, ಒಂದು ತಪ್ಪು ಒತ್ತಿ ಮುಂದಿನ ಐದು ವರ್ಷಗಳವರೆಗೆ ಪಾವತಿಸಲಿದ್ದೀರಿ, ಮತದಾನವು ನಿಮ್ಮ ಸ್ವಂತ ನಾಯಕನನ್ನು ಆಯ್ಕೆ ಮಾಡುವ ಶಕ್ತಿಯನ್ನು ನೀಡುತ್ತದೆ, ಮತದಾರರು ಜಾಗೃತರಾಗಿ ಮತದಾನ ಮಾಡಿರಿ ಎಂಬ ಘೋಷಣೆಗಳು ಮೊಳಗಿದವು. ಒಬ್ಬ ಮತದಾರನಿಗೆ ಮಾತ್ರ ಅಧಿಕಾರವನ್ನು ತರಲು ಅಥವಾ ಬೀಳಿಸಲು ಅಧಿಕಾರವಿದೆ ಎಂಬ ಘೋಷ ವಾಕ್ಯಗಳೊಂದಿಗೆ ಹೈಸ್ಕೂಲ್ ಮೈದಾನದ ಬೀರಲಿಂಗೇಶ್ವರ ದೇವಸ್ಥಾನದಿಂದ ಆರಂಭಗೊಂಡು ಪಿ.ಬಿ.ರಸ್ತೆ, ಹಳೇ ಬಸ್ ನಿಲ್ದಾಣ, ಗಾಂಧಿ ಸರ್ಕಲ್, ಅಶೋಕ ರಸ್ತೆಯ ಮೂಲಕ ಜಯದೇವ ಸರ್ಕಲ್ ಬಳಿ ಬಂದು ಕ್ಯಾಂಡಲ್ ಹಚ್ಚಿ, ಮಾನವ ಸರಪಳಿ ನಿರ್ಮಿಸಿ ಮತದಾನ ಜಾಗೃತಿ ಮೂಡಿಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಉಪನಿರ್ದೇಶಕಿ ಶಾರದಾ ದೊಡ್ಡಗೌಡ್ರು, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರಿಯದರ್ಶಿನಿ, ಯೋಜನಾಧಿಕಾರಿ ನೇತ್ರಾವತಿ.ಜಿ, ಅಂಗನವಾಡಿ ಮೇಲ್ವಿಚಾರಕಿಯರು, ಕಾರ್ಯಕರ್ತೆಯರು, ಸಹಾಯಕಿಯರು ಇನ್ನಿತರರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T